ಸಂಪುಟ : 10 ಸಂಚಿಕೆ: 80 ಪುಟ : 4+2 ಬೆಲೆ: 3.00 ರವಿವಾರ ಎಪ್ರಿಲ್ 27 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 80 Pages : 4+2 Price : 3.00 Sunday April 27 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಸಾವರ್ಕರ್ ಮತ್ತು ಗೋಲ್ವಾಲ್ಕರ್ ಅಂಬೇಡ್ಕರ್ ಅವರ ಸಂವಿಧಾನದ ವಿರುದ್ಧ ಇದ್ದರು: ಸಿ.ಎಂ ಸಿದ್ದರಾಮಯ್ಯ

# ಸಂಘ ಪರಿವಾರ ಯಾವತ್ತೂ ಸ್ವಾತಂತ್ರ್ಯ ಹೋರಾಟಕ್ಕೆ ಬರಲೇ ಇಲ್ಲ

**■ವಿಜಯಸಾಕ್ಷಿ ಸುದ್ದಿ, ಮೈಸೂರು**

ಸಂಘ ಪರಿವಾರ ಯಾವತ್ತೂ ಸ್ವಾತಂತ್ರ್ಯ ಹೋರಾಟಕ್ಕೆ ಬರಲೇ ಇಲ್ಲ. ಈಗ ದೇಶಭಕ್ತಿ ಬಗ್ಗೆ ಮಾತಾಡ್ತಾರೆ. ಸಾವರ್ಕರ್ ಮತ್ತು ಗೋಲ್ವಾಲ್ಕರ್ ಅಂಬೇಡ್ಕರ್ ಅವರ ಸಂವಿಧಾನದ ವಿರುದ್ಧ ಇದ್ದವರು ಎನ್ನುವ ಸ್ಪಷ್ಟ ತಿಳಿವಳಿಕೆ ಕಾರ್ಯಕರ್ತರಿಗೆ ಇರಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.



ಯುವ ಕಾಂಗ್ರೆಸ್ ಆಯೋಜಿಸಿದ್ದ "ಯುವ ಕ್ರಾಂತಿ" ಕಾರ್ಯಕರ್ತರ ತರಬೇತಿ ಶಿಬಿರದಲ್ಲಿ ವಿಶೇಷ ಉಪನ್ಯಾಸ ನೀಡಿದರು.

ಸ್ವಾತಂತ್ರ್ಯ ಹೋರಾಟ ಮತ್ತು ಆಧುನಿಕ ಭಾರತ ನಿರ್ಮಾಣದಲ್ಲಿ ಕಾಂಗ್ರೆಸ್ ನ ತ್ಯಾಗ-ಬಲಿದಾನ ಮಹತ್ವದ ಪಾತ್ರ ನಿರ್ವಹಿಸಿದೆ. ದೇಶಕ್ಕೆ ನಾಗರಿಕ ಹಕ್ಕು ಮತ್ತು ಸಾಮಾಜಿಕ ನ್ಯಾಯ ಒದಗಿಸಲು ಹುಟ್ಟಿದ ಪಕ್ಷ ಕಾಂಗ್ರೆಸ್. ಸಂಘ ಪರಿವಾರ ಯಾವತ್ತೂ ಸ್ವಾತಂತ್ರ್ಯ ಹೋರಾಟಕ್ಕೆ ಬರಲೇ ಇಲ್ಲ. ಈಗ ದೇಶಭಕ್ತಿ ಬಗ್ಗೆ ಮಾತಾಡ್ತಾರೆ ಎಂದು ಸಿ.ಎಂ ವ್ಯಂಗ್ಯವಾಡಿದರು.

ಗಾಂಧಿ ಅವರು ಸ್ವಾತಂತ್ರ್ಯ ಹೋರಾಟದ ನೇತೃತ್ವ ವಹಿಸಿದಂತೆ, ಭಾರತದಲ್ಲಿ ಅಂಬೇಡ್ಕರ್ ಅವರ ಸಂವಿಧಾನಕ್ಕೆ ಭದ್ರ ಬುನಾಧಿ ಹಾಕಿದವರು ನೆಹರು. ಬಹುತ್ವದ ಭಾರತದ ನೆಲದಲ್ಲಿ ಏಕತೆ ತಂದು ಸಹಿಷ್ಣುತೆಯನ್ನು ಆಚರಣೆಗೆ ತರಲು ನೆಹರೂ ಕೊಡುಗೆ ಅಪಾರ ಎಂದರು. ಮನುಸ್ಮೃತಿ ಪ್ರೇರಿತ ಜಾತಿ ವ್ಯವಸ್ಥೆ ಭಾರತ ಸಮಾಜವನ್ನು ಜಾತಿ ಆಧಾರದಲ್ಲಿ ಬಿರುಕು ಮೂಡಿಸಿತು. ಈ ಇತಿಹಾಸ ನಿಮಗೆ ಗೊತ್ತಿರಬೇಕು ಎಂದರು. ಯುವ ಕಾಂಗ್ರೆಸ್ ಅಂದರೆ ಭಾರತದ ಸಂವಿಧಾನ ಮತ್ತು ಬಹುತ್ವದ ರಕ್ಷಣೆಗೆ ನಿಂತ ಯುವ ಸೈನ್ಯ. ನಾವು ಏಕೆ ಕಾಂಗ್ರೆಸ್ ಕಟ್ಟುತ್ತಿದ್ದೇವೆ, ಖಖಖ ಮತ್ತು ಸಂಘ ಪರಿವಾರ ಹೇಗೆ ಭಾರತದ ಬಹುತ್ವ ಮತ್ತು ಸಂವಿಧಾನ ವಿರೋಧಿ ಎನ್ನುವ ಸ್ಪಷ್ಟತೆ ನಿಮಗೆ ಇರಬೇಕು. ಈ ಸ್ಪಷ್ಟತೆ ಇಲ್ಲದವರು ಬಹಳ ವರ್ಷ ಕಾಂಗ್ರೆಸ್ ನಲ್ಲಿ ಉಳೀತಾರೆ ಎನ್ನುವುದು ಅನುಮಾನ ಎಂದರು.

> "ಅಧಿಕಾರ ಬಲಾಢ್ಯರ ಕೈಯಲ್ಲಿ ಇರಬಾರದು. ಜನ ಸಾಮಾನ್ಯರ ಕೈಯಲ್ಲಿ ಇರಬೇಕು" ಎಂದು ಅಂಬೇಡ್ಕರ್ ಹೇಳಿದ್ದರು. ಕಾಂಗ್ರೆಸ್ ಜನರ ಕೈಗೆ ಅಧಿಕಾರ ಮತ್ತು ಅವಕಾಶಗಳನ್ನು ನೀಡುತ್ತಿದೆ. ಬಿಜೆಪಿ ಬಲಾಢ್ಯರಿಗೆ ಅಧಿಕಾರ ಮತ್ತು ಅವಕಾಶ ನೀಡುತ್ತಿದೆ. ಇದು ಸಂವಿಧಾನ ವಿರೋಧಿ. ಹೀಗಾಗಿ ಬಿಜೆಪಿ ಸಂವಿಧಾನವನ್ನೇ ವಿರೋಧಿಸುತ್ತದೆ.
>
> –ಸಿದ್ದರಾಮಯ್ಯ. ಮುಖ್ಯಮಂತ್ರಿಗಳು

> ಶರಣ ಬಸವಣ್ಣ ಹೇಳಿದ ರೀತಿಯಲ್ಲಿ ದೇವರು ಇದ್ದಾನೆ. ಬಸವಣ್ಣರ ರೀತಿಯಲ್ಲಿ ದೇವರನ್ನು ಕಾಣಬೇಕು. ಮಾಡಬಾರದ ಪಾಪಗಳನ್ನೆಲ್ಲಾ ಮಾಡಿ ದೇವರಿಗೆ ಕೈ ಮುಗಿದರೆ ಪಾಪ ಹೋಗುವುದಿಲ್ಲ. ಬಿಜೆಪಿ ದೇವರು, ಧರ್ಮದ ಹೆಸರಲ್ಲಿ ಬರೀ ಸುಳ್ಳು ಹರಡುತ್ತದೆ. ಈ ಬಗ್ಗೆ ದೇಶದ ಜನರ ತಿಳಿವಳಿಕೆ ಹೆಚ್ಚಿಸುವ ಕೆಲಸ ಆಗಬೇಕಿದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

ಸ್ವಾತಂತ್ರ, ಸಮಾನತೆ, ಬ್ರಾತೃತ್ವ ಹಾಗೂ ಸಹಿಷ್ಣತೆ, ಸಹಭಾಳ್ವೆ ನಮ್ಮ ಸಂವಿಧಾನದ ಉಸಿರು. ಇದೇ ಭಾರತದ ಉಸಿರು ಕೂಡ ಆಗಿದೆ ಎಂದರು. ನಾನು ಎರಡು ಬಾರಿ ಮುಖ್ಯಮಂತ್ರಿಯಾಗಿ ಅಸಮಾನತೆಯನ್ನು ಕಡಿಮೆ ಮಾಡುವ ಕಾರ್ಯಕ್ರಮಗಳನ್ನು ರೂಪಿಸಿ ಜಾರಿ ಮಾಡಿದ್ದೇವೆ. ಸ್ವಾತಂತ್ರ್ಯ ಸಾರ್ಥಕತೆ ಆಗಬೇಕಾದರೆ ಪ್ರತಿಯೊಬ್ಬರೂ ಆರ್ಥಿಕ ಮತ್ತು ಸಾಮಾಜಿಕ ಸಬಲತೆ ಪಡೆದುಕೊಳ್ಳಬೇಕು. ಕಟ್ಟ ಕಡೆಯ ಮನುಷ್ಯನಿಗೆ ಶಕ್ತಿ ಕೊಡುವುದೇ ಸರ್ವೋದಯದ ಆಶಯ ಎಂದರು. ಮೌಢ್ಯ, ಕಂದಾಚಾರ, ಕರ್ಮ ಸಿದ್ಧಾಂತವನ್ನು ಕೃತಕವಾಗಿ ಸೃಷ್ಟಿಸಿ ನೀರು ಗೊಬ್ಬರ ಹಾಕಿ ಗಟ್ಟಿ ಮಾಡಿಟ್ಟಿದ್ದಾರೆ. ದೇವರು ಒಬ್ಬರಿಗೊಂದು ಮತ್ತೊಬ್ಬರಿಗೊಂದು ಮಾಡುವುದಿಲ್ಲ.

ದೇವರ ಹೆಸರಲ್ಲಿ ಮೌಢ್ಯಗಳನ್ನು ಬಿತ್ತುವವರ ಬಗ್ಗೆ ಎಚ್ಚರ ವಿರಲಿ ಎಂದರು.

ತನ್ನನ್ನು ಚುನಾವಣೆಯಲ್ಲಿ ಸೋಲಿಸಿದ್ದು ಸಾವರ್ಕರ್ ಮತ್ತು ಡಾಂಗೆ ಎಂದು ಅಂಬೇಡ್ಕರ್ ಅವರೇ ಸ್ಪಷ್ಟವಾಗಿ ಬರೆದಿದ್ದಾರೆ ಎಂದರೆ. ನಿಮಗೆ ಸ್ಪಷ್ಟತೆ ಮತ್ತು ಬದ್ಧತೆ ಇದ್ದರೆ ಯಾರು ಏನೇ ಮಾಡಿದರೂ ನೀವು ಬದಲಾಗಲ್ಲ ಎಂದರು. ಯುವ ಕಾಂಗ್ರೆಸ್ ಇಂದು ಇಲ್ಲಿ ಆಯೋಜಿಸಿರುವ ಇಂತಹ ಕಾರ್ಯಾಗಾರಗಳು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ನಡೆಯಬೇಕು ಎಂದು ಸಿದ್ದರಾಮಯ್ಯ ಕರೆ ನೀಡಿದರು.

## ಪುಷ್ಪಾವತಿ ಬಳ್ಳಾರಿಗೆ ಗೌರವ ಡಾಕ್ಟರೇಟ್ ಪ್ರದಾನ



**■ವಿಜಯಸಾಕ್ಷಿ ಸುದ್ದಿ, ಡಂಬಳ**

ಗದಗ ಜಿಲ್ಲೆಯ ಸ್ಥಳೀಯ ಪ್ರತಿಷ್ಠಿತ ಕೆ ವಿ ಎಸ್ ಆರ್ ಪ್ರೌಢಶಾಲೆಯ ಮುಖ್ಯ ಶಿಕ್ಷಕಿಯಾಗಿ ಸೇವೆ ಸಲ್ಲಿಸುತ್ತಿರುವ ಹಾಗೂ ಕರ್ನಾಟಕ ರಾಜ್ಯ ಶಾಲಾ ಶಿಕ್ಷಣ ಇಲಾಖೆಯ ನೌಕರರ ಸಂಘದ ಗದಗ ಜಿಲ್ಲಾ ಘಟಕದ ಖಜಾಂಚಿಗಳಾದ ಶ್ರೀಮತಿ ಪುಷ್ಪಾವತಿ ಬಸವರಾಜ್ ಬಳ್ಳಾರಿ ಅವರಿಗೆ ತಮಿಳುನಾಡಿನ ಏಷಿಯಾ ಇಂಟರ್ ನ್ಯಾಷನಲ್ ಕಲ್ಚರ್ ರಿಸರ್ಚ್ ಯೂನಿವರ್ಸಿಟಿ ಹಾಗೂ ಏಷ್ಯಾ ಇಂಟರ್ ನ್ಯಾಶನಲ್ ಕಲ್ಚರಲ್ ಅಕಾಡೆಮಿ ವತಿಯಿಂದ ಸಾವಿರಾರು ವಿದ್ಯಾರ್ಥಿಗಳ ಭವಿಷ್ಯದ ರೂವಾರಿಗಳಾಗಿ ಶಿಕ್ಷಣ ಮತ್ತು ಸಮಾಜ ಸೇವಾ ಕ್ಷೇತ್ರಗಳಲ್ಲಿ ಅನುಪಮ ಸೇವೆ ಪರಿಗಣಿಸಿ 2025ನೇ ಸಾಲಿನಲ್ಲಿ ಕೊಡಮಾಡುವ ಗೌರವ ಡಾಕ್ಟರೇಟ್ ಪದವಿಗೆ ಭಾಜನರಾಗಿದ್ದಾರೆ. ಬೆಂಗಳೂರಿನ ಹೊಸೂರು ಕ್ಲಾರೆಸ್ಸಾ ಸಾಂಸ್ಕೃತಿಕ ಭವನದಲ್ಲಿ ಗಣ್ಯರ ಉಪಸ್ಥಿತಿಯಲ್ಲಿ ಗೌರವ ಡಾಕ್ಟ-ರೇಟ್ ಪದವಿ ನೀಡಲಾಯಿತು.

ಗದಗ ಜಿಲ್ಲೆಯ ಶಿಕ್ಷಕರು, ನೌಕರರ ಸಂಘದ ಸದಸ್ಯರು, ಡಂಬಳ, ಹಿರೇವಡ್ಡಟ್ಟಿ ಸೇರಿದಂತೆ ವಿವಿಧ ಗ್ರಾಮದ ವಿದ್ಯಾರ್ಥಿಗಳು, ಹಿತೈಷಿಗಳು ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

### ಮಳೆ ಅವಾಂತರ: ಮಾರುಕಟ್ಟೆ ಪಿಲ್ಲರ್, ಗೋಡೆ ಕುಸಿತ!

# ಬಿರುಗಾಳಿಗೆ ಹಾರಿಹೋದ ತಗಡುಗಳು- ಸಿಡಿಲಿಗೆ 4 ಕುರಿ, 6 ಆಡು ಬಲಿ!

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದಲ್ಲಿ ಸುರಿದ ಭಾರೀ ಮಳೆಯಿಂದ ಸಾಕಷ್ಟು ಅನಾಹುತ ಸಂಭವಿಸಿದೆ. ಭಾರೀ ಗಾಳಿ-ಮಳೆಗೆ ಗದಗನ ಬೆಟಗೇರಿಯ ತರಕಾರಿ ಮಾರುಕಟ್ಟೆ ಪಿಲ್ಲರ್, ಗೋಡೆ ಕುಸಿತಗೊಂಡಿದೆ.

ಮಾರುಕಟ್ಟೆಯಲ್ಲಿ ಅಳವಡಿಸಿರುವ ಬೃಹತ್ ಛಾವಣಿ ಇದಾಗಿದ್ದು, ಭಾರೀ ಗಾಳಿ ಹಾಗೂ ಮಳೆಗೆ ಬೃಹತ್ ತಗಡಿನ ಶೆಡ್ ವಾಲಿದೆ. ಕಟ್ಟಡ ಸ್ಟ್ರಕ್ಚರ್ ವಾಲಿದ್ದಕ್ಕೆ ಸ್ಥಳೀಯರು ಗಾಬರಿಗೊಂಡಿದ್ದಾರೆ. 2017-18 ರಲ್ಲಿ ಗದಗ ಬೆಟಗೇರಿ ನಗರಸಭೆ ಅನುದಾನದಲ್ಲಿ ಸುಮಾರು 70 ಲಕ್ಷದಲ್ಲಿ ಈ ಕಟ್ಟಡ ನಿರ್ಮಾಣ ಮಾಡಲಾಗಿತ್ತು.

ಇನ್ನೂ ಕಳಪೆ ಕಾಮಗಾರಿಯಿಂದಾಗಿ ಕಟ್ಟಡ ಮಾದರಿ ವಾಲಿರುವ ಬಗ್ಗೆ ಸ್ಥಳೀಯರು ಆರೋಪ ಮಾಡಿದ್ದಾರೆ. ಇನ್ನೂ ಘಟನೆಯಿಂದ ತರಕಾರಿ ಮಾರುಕಟ್ಟೆಯಿಂದ ವ್ಯಾಪಾರಿಗಳನ್ನು ತೆರವು ಮಾಡಲಾಗಿದೆ. ಸ್ಥಳಕ್ಕೆ ನಗರಸಭೆ ಆಯುಕ್ತ ರಾಜಾರಾಮ್, ಎಸ್ ಪಿ ಬಿಎಸ್ ನೇಮಗೌಡ ಭೇಟಿ ನೀಡಿ ಪರಿಶೀಲಿಸಿದರು. ಈ ವೇಳೆ ಕಟ್ಟಡ ತೆರವು ಮಾಡಿ, ಪುನಃ ನಿರ್ಮಾಣ ಮಾಡಲು ಸಾರ್ವಜನಿಕರು ಒತ್ತಾಯ ಮಾಡಿದ್ದಾರೆ.





ಇನ್ನೂ ಮತ್ತೊಂದೆಡೆ ಇಂದು ಸುರಿದ ಭಾರೀ ಮಳೆಗೆ ಜಿಲ್ಲೆಯ ರೋಣ ತಾಲೂಕಿನ ಎರೆಬೇಲೆರಿ ಗ್ರಾಮದಲ್ಲಿ ಅಪಾರ ಹಾನಿಯಾಗಿದೆ. ಶಾಲೆಯ ಮೇಲಿನ ತಗಡುಗಳು ಸೇರಿ ಮನೆ ಮೇಲಿನ ತಗಡುಗಳು ಬಿರುಗಾಳಿಗೆ ಹಾರಿಹೋಗಿದೆ. ಅಲ್ಲದೇ ಹಲವಾರು ವಿದ್ಯುತ್ ಕಂಬ ಬಿದ್ದಿವೆ ಮತ್ತು ಸಾಕಷ್ಟು ಗಿಡಗಳು ಮರಗಳು ಬಿದ್ದು, ಅನಾಹುತ ಸೃಷ್ಟಿಯಾಗಿದೆ.

ಸಿಡಿಲಿಗೆ 4 ಕುರಿ, 6 ಆಡು ಬಲಿ- ಕುರಿಗಾಹಿ ಕಣ್ಣೀರು ! ಜಿಲ್ಲೆಯಾದ್ಯಂತ ಕಳೆದ ಎರಡು ದಿನಗಳಿಂದ ಗುಡುಗು ಸಹಿತ ಮಳೆಯಾಗಿದ್ದು, ಇಟಗಿ ಗ್ರಾಮದ ಶೇಖವ್ವ ತಿಮ್ಮಪ್ಪ ಪಲ್ಲೇದ ಇವರಿಗೆ ಸೇರಿದ 4 ಕುರಿ, 8 ಆಡುಗಳು ಸಿಡಿಲಿಗೆ ಬಲಿಯಾಗಿವೆ. ಘಟನೆಯಿಂದ ಮೂರು ಕುರಿಗಳಿಗೆ ಗಂಭೀರ ಸ್ವರೂಪದ ಗಾಯಗಳಾಗಿದ್ದು, ಕುರಿಗಳನ್ನು ಕಳೆದುಕೊಂಡ ಕುರಿಗಾಹಿ ಕಣ್ಣೀರು ಹಾಕಿದ್ದಾರೆ. ಘಟನಾ ಸ್ಥಳಕ್ಕೆ ಸಂಬಂಧ ಪಟ್ಟ ಅಧಿಕಾರಿಗಳು ಭೇಟಿ ನೀಡಿ ಪರಿಶೀಲಿಸಿದರು.

## ಇಂದು ಶರಣರ ವೈಭವ ರಥಯಾತ್ರೆ ಗದಗ ಜಿಲ್ಲೆಗೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಆಯೋಜಿಸಿರುವ ಅನುಭವ ಮಂಟಪ ಬಸವಾದಿ ಶರಣರ ವೈಭವ ರಥಯಾತ್ರೆಯು ಎ.27 ರಂದು ಜಿಲ್ಲೆಗೆ ಆಗಮಿಸಲಿದೆ ಎಂದು ಕನ್ನಡ ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ಅಪಘಾತ: ಚಾಲಕ ಮೃತ

**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ತಾಲೂಕಿನ ಶಹಪೂರ ಗ್ರಾಮದ ಹೆದ್ದಾರಿ 50 ರ ಬಳಿ ಲಾರಿಗೆ ಲಾರಿ ಡಿಕ್ಕಿಯಾಗಿ ಶನಿವಾರ ಚಾಲಕ ಮೃತ ಪಟ್ಟಿದ್ದಾನೆ. ಲಾರಿಯಲ್ಲಿದ್ದ ಇಬ್ಬರಿಗೆ ಗಾಯವಾಗಿದೆ.

ಹಿಂಬದಿ ಲಾರಿ ಡಿಕ್ಕಿಯಾದ ಪರಿಣಾಮ ಮಹಾರಾಷ್ಟ್ರ ಮೂಲದ ಶಶಿಕಾಂತ ಚವ್ಹಾಣ್ (28) ವರ್ಷ ಮೃತ ದುರ್ದೈವಿ ಯಾಗಿದ್ದಾನೆ.



ಕೇರಳದ ರಾಜ್ಯದ ಮಹಮ್ಮದ್ ಅಬೂಬಕರ್ ಹಾಗೂ ಅರುಣ್ ಲಾಲ್ ಎಂಬುವವರು ಗಾಯಗೊಂಡಿದ್ದಾರೆ. ಮುನಿರಾಬಾದ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಕಾಲುಬಾಯಿ ರೋಗ ಲಸಿಕಾ ಅಭಿಯಾನ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮಾಜಿ ಶಾಸಕ ಗಂಗಣ್ಣ ಮಹಾಂತಶೆಟ್ಟರ ಅವರ ನಿವಾಸದಲ್ಲಿ ಪಶುವೈದ್ಯಕೀಯ ಇಲಾಖೆ ವತಿಯಿಂದ ಜಾನುವಾರುಗಳಿಗೆ ಉಚಿತ ಕಾಲುಬಾಯಿ ರೋಗ ಲಸಿಕಾ ಅಭಿಯಾನಕ್ಕೆ ಶಾಸಕ ಡಾ. ಚಂದ್ರು ಲಮಾಣಿ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಡಾ. ಚಂದ್ರು ಲಮಾಣಿ, ಈಗಾಗಲೇ ಮಳೆಗಾಲ ಪ್ರಾರಂಭವಾಗಿದ್ದು, ಇದು ಜಾನುವಾರಗಳಿಗೆ ಹಲವಾರು ರೋಗಗಳಿಗೆ ಕಾರಣವಾಗಬಹುದಾಗಿದೆ. ಆದ್ದರಿಂದ ಸರಕಾರ ಜಾನುವಾರುಗಳಿಗೆ ಕಾಲು-ಬಾಯಿ ಲಸಿಕೆ ಪ್ರಾರಂಭಿಸಿದ್ದು, ರೈತರು ಇದರ ಸದುಪಯೋಗ ಪಡೆದುಕೊಳ್ಳಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಗಂಗಣ್ಣ ಮಹಾಂತಶೆಟ್ಟರ, ಅಧಿಕಾರಿಗಳು, ಆಸ್ಪತ್ರೆಯ ವೈದ್ಯಾಧಿಕಾರಿಗಳು, ಪುರಸಭೆಯ ಸದಸ್ಯರು, ಮುಖಂಡರು, ಪದಾಧಿಕಾರಿಗಳು, ರೈತ ಬಾಂಧವರು ಉಪಸ್ಥಿತರಿದ್ದರು.

### ಕರ್ನಾಟಕ ಉಚ್ಚ ನ್ಯಾಯಾಲಯದ ಧಾರವಾಡ ಪೀಠದಲ್ಲಿ ವಿಶೇಷ ಲೋಕ ಅದಾಲತ್

# 1274 ಪ್ರಕರಣಗಳ ಇತ್ಯರ್ಥ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಕರ್ನಾಟಕ ಉಚ್ಚ ನ್ಯಾಯಾಲಯದ ಧಾರವಾಡ ಪೀಠದಲ್ಲಿ ಶನಿವಾರ ಬೆಳಿಗ್ಗೆಯಿಂದ ಸಂಜೆಯವರೆಗೆ ಹಿರಿಯ ನ್ಯಾಯಮೂರ್ತಿಗಳಾದ ಎಸ್.ಜಿ. ಪಂಡಿತ ಅವರ ನೇತೃತ್ವದಲ್ಲಿ ವಿಶೇಷ ಲೋಕ ಅದಾಲತ್ ಏರ್ಪಡಿಸಲಾಗಿತ್ತು.

ಈ ವಿಶೇಷ ಲೋಕ ಅದಾಲತ್‌ನಲ್ಲಿ ನ್ಯಾಯಮೂರ್ತಿಗಳಾದ ಎಸ್.ಜಿ. ಪಂಡಿತ, ಇ.ಎಸ್. ಇಂದಿರೇಶ್, ವಿ. ಶ್ರೀಶಾನಂದ, ಸಿ.ಎಮ್. ಪೂಣಚ್ಚ, ಜಿ. ಬಸವರಾಜ, ಉಮೇಶ ಎಮ್. ಅಡಿಗ ಹಾಗೂ ಇವರೊಂದಿಗೆ ಲೋಕ ಅದಾಲತ್‌ನ ಸದಸ್ಯರಾದ ಗೋಪಾಲ ಬಿ.ಪಾಟೀಲ, ಸಾಜೀದ ಗೂಡವಾಲಾ, ರಾಕೇಶ ಎಮ್.ಬಿಳ್ಕಿ, ವಿ.ಪಿ. ವಡವಿ, ಸೀತಾಲಕ್ಷ್ಮೀ ಪುರ್ಲಿ ಮತ್ತು ಶೈಲಾ ಬೆಳ್ಳಿಕಟ್ಟಿ ಅವರನ್ನೊಳಗೊಂಡು ಒಟ್ಟು 6 ಪೀಠಗಳನ್ನು ಆಯೋಜಿಸಲಾಗಿತ್ತು.



ಸದರಿ ಲೋಕ ಅದಾಲತ್‌ನಲ್ಲಿ ಅಪಘಾತ ಪರಿಹಾರ ಪ್ರಕರಣಗಳ ಜೊತೆಗೆ ವಿಶೇಷವಾಗಿ ಚೆಕ್ ಅಮಾನ್ಯ ಪ್ರಕರಣಗಳ ಮೇಲ್ಮನವಿಗಳು-43, ಸಿವಿಲ್ ಪ್ರಕರಣಗಳು-2, ರಿಟ್ ಅರ್ಜಿಗಳು-5 ಹೀಗೆ ಹಲವು ವರ್ಷಗಳಿಂದ ಇತ್ಯರ್ಥವಾಗದ ಪ್ರಕರಣಗಳನ್ನು ಇತ್ಯರ್ಥಗೊಳಿಸುವ ಮೂಲಕ ಉಭಯ ಪಕ್ಷಗಾರರ ಪರಸ್ಪರ ಸಂಬಂಧಗಳನ್ನು ಉತ್ತಮವಾಗಿ, ಸೌಹಾರ್ದಯುತವಾಗಿ ಎಲ್ಲರಿಗೂ ನ್ಯಾಯ ಎಂಬ ಧ್ಯೇಯ ವಾಕ್ಯದಂತೆ ಅತ್ಯಂತ ಸರಳ ರೀತಿಯಲ್ಲಿ ನ್ಯಾಯಾಲಯದ ಅಂಗಳಕ್ಕೆ ಬಂದ ಕಕ್ಷಿದಾರರಿಗೆ ನ್ಯಾಯ ದೊರಕುವಂತೆ ಮಾಡಿದ್ದು ವಿಶೇಷವಾಗಿತ್ತು.

ಸದರಿ ಆದಾಲತ್‌ನಲ್ಲಿ ಒಟ್ಟು 1274 ಪ್ರಕರಣಗಳನ್ನು ಕೈಗೆತ್ತಿಕೊಳ್ಳಲಾಗಿತ್ತು. ಆ ಪೈಕಿ ಒಟ್ಟು 173 ಪ್ರಕರಣಗಳನ್ನು ರೂ.3,70,59,863 ಮೊತ್ತಕ್ಕೆ ಇತ್ಯರ್ಥಪಡಿಸಲಾಯಿತು ಎಂದು ಉಚ್ಚ ನ್ಯಾಯಾಲಯ ಕಾನೂನು ಸೇವಾ ಸಮಿತಿ ಧಾರವಾಡ ಪೀಠದ ಕಾರ್ಯದರ್ಶಿ ಮತ್ತು ಅಧೀಕ ವಿಲೇಖನಾಧಿಕಾರಿ (ನ್ಯಾಯಾಂಗ) ಜೆರಾಲ್ಡ್ ರುಡಾಲ್ಫ್ ಮೆಂಡೋನ್ಸಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂಪಾದಕೀಯ

### ವಕ್ಫ್ ತಿದ್ದುಪಡಿ ಕಾಯ್ದೆ: ಸುಪ್ರೀಂ ಕೋರ್ಟ್‌ನಲ್ಲಿ ಕೇಂದ್ರದ ಸಮರ್ಥನೆ


ವಕ್ಫ್ ಕಾಯ್ದೆಗೆ ತರಲಾಗಿರುವ ತಿದ್ದುಪಡಿಗಳು 'ಶಾಸನಾತ್ಮಕ ಅಧಿಕಾರದ ಮಾನ್ಯ ಮತ್ತು ಕಾನೂನುಬದ್ಧ ಬಳಕೆ' ಎಂದು ಕೇಂದ್ರ ಸರ್ಕಾರವು ಸುಪ್ರೀಂ ಕೋರ್ಟ್‌ನಲ್ಲಿ ಅತ್ಯಂತ ಬಲವಾಗಿ ಪ್ರತಿಪಾದಿಸಿದೆ. ಈ ಮಹತ್ವದ ಬದಲಾವಣೆಗಳು ವಕ್ಫ್ ಮಂಡಳಿಗಳ ಕಾರ್ಯಕ್ಷಮತೆಯನ್ನು ಗಮನಾರ್ಹವಾಗಿ ಸುಧಾರಿಸುವ ಮತ್ತು ಅಮೂಲ್ಯವಾದ ವಕ್ಫ್ ಆಸ್ತಿಗಳನ್ನು ಅಕ್ರಮವಾಗಿ ಕಬಳಿಸುವುದರಿಂದ ನಿರ್ಣಾಯಕವಾಗಿ ರಕ್ಷಿಸುವ ಸ್ಪಷ್ಟ ಗುರಿಯನ್ನು ಹೊಂದಿದೆ ಎಂದು ಸರ್ಕಾರವು ನ್ಯಾಯಾಲಯಕ್ಕೆ ಖಚಿತವಾಗಿ ತಿಳಿಸಿದೆ.

ಕೇಂದ್ರ ಸರ್ಕಾರವು ನ್ಯಾಯಾಲಯಕ್ಕೆ ಸಲ್ಲಿಸಿರುವ ಪ್ರಮಾಣಪತ್ರದಲ್ಲಿ, ವಕ್ಫ್ ಕಾಯ್ದೆಯ ಈ ತಿದ್ದುಪಡಿಗಳು ಭಾರತದ ಸಂವಿಧಾನದ ಉದಾತ್ತ ಆಶಯಗಳಿಗೆ ಸಂಪೂರ್ಣವಾಗಿ ಅನುಗುಣವಾಗಿವೆ ಮತ್ತು ಯಾವುದೇ ರೀತಿಯ ಪಕ್ಷಪಾತ ಅಥವಾ ತಾರತಮ್ಯವನ್ನು ಒಳಗೊಂಡಿಲ್ಲ ಎಂದು ಸ್ಪಷ್ಟವಾಗಿ ಹೇಳಿದೆ. ವಕ್ಫ್ ಆಸ್ತಿಗಳ ನಿರ್ವಹಣೆಯಲ್ಲಿ ಉನ್ನತ ಮಟ್ಟದ ಪಾರದರ್ಶಕತೆ ಮತ್ತು ಕಟ್ಟುನಿಟ್ಟಾದ ಉತ್ತರದಾಯಿತ್ವವನ್ನು ಸ್ಥಾಪಿಸುವ ಅನಿವಾರ್ಯತೆಯನ್ನು ಸರ್ಕಾರವು ಬಲವಾಗಿ ಪ್ರತಿಪಾದಿಸಿದೆ. 1995 ರ ವಕ್ಫ್ ಕಾಯ್ದೆಗೆ 2013 ರಲ್ಲಿ ಮಹತ್ವದ ತಿದ್ದುಪಡಿಗಳನ್ನು ಮಾಡಲಾಗಿತ್ತು. ಈ ತಿದ್ದುಪಡಿಗಳ ಸಿಂಧುತ್ವವನ್ನು ಪ್ರಶ್ನಿಸಿ ಸುಪ್ರೀಂ ಕೋರ್ಟ್‌ನಲ್ಲಿ ಹಲವಾರು ಅರ್ಜಿಗಳನ್ನು ಸಲ್ಲಿಸಲಾಗಿದೆ. ಈ ಸಂವೇದನಾಶೀಲ ಪ್ರಕರಣದ ವಿಚಾರಣೆಯನ್ನು ಸುಪ್ರೀಂ ಕೋರ್ಟ್ ಮುಂದುವರೆಸಿದ್ದು, ಮುಂದಿನ ದಿನಗಳಲ್ಲಿ ಈ ಕುರಿತು ತನ್ನ ಮಹತ್ವದ ತೀರ್ಪನ್ನು ಪ್ರಕಟಿಸುವ ಸಾಧ್ಯತೆ ಇದೆ. ವಕ್ಫ್ ತಿದ್ದುಪಡಿ ಕಾಯ್ದೆಯ ಕಾನೂನುಬದ್ಧತೆಯ ಕುರಿತಾದ ನ್ಯಾಯಾಲಯದ ತೀರ್ಪು ದೇಶಾದ್ಯಂತ ವ್ಯಾಪಕವಾಗಿ ಹರಡಿರುವ ವಕ್ಫ್ ಆಸ್ತಿಗಳ ನಿರ್ವಹಣೆ ಮತ್ತು ಅವುಗಳ ರಕ್ಷಣೆಯ ಭವಿಷ್ಯದ ಮೇಲೆ ಮಹತ್ತರವಾದ ಪರಿಣಾಮವನ್ನು ಬೀರಲಿದೆ ಎಂಬುದರಲ್ಲಿ ಯಾವುದೇ ಸಂದೇಹವಿಲ್ಲ.

---

### ನಾಯಕರನ್ನು ಆರಾಧಿಸುವದು ಬೇಡ, ಅವರನ್ನು ಅನುಕರಿಸೋಣ

# ನಾಯಕರಂತೆ ನಡೆವುದು ಕಷ್ಟ!



ನಾವು ಅನೇಕ ಗಣ್ಯರ ಜಯಂತಿ, ಪುಣ್ಯಸ್ಮರಣೆಗಳನ್ನು ಆಚರಿಸುತ್ತೇವೆ. ಪುಷ್ಪಾರ್ಚನೆ ಮಾಡುತ್ತೇವೆ, ಸಭೆ-ಸಮಾರಂಭಗಳನ್ನು, ದೊಡ್ಡ ದೊಡ್ಡ ಮೆರವಣಿಗೆಗಳನ್ನು ನಡೆಸುತ್ತೇವೆ. ಆದರೆ ನಾವೆಲ್ಲರೂ ಈ ಮಹಾನ್ ವ್ಯಕ್ತಿತ್ವಗಳ ಕಲ್ಪನೆಗಳನ್ನು ನಮ್ಮ ಬದುಕಿನಲ್ಲಿ ಅನುಸರಿಸುತ್ತಿದ್ದೇವೆಯೇ? ಅವರ ಜೀವನದ ಸಂದೇಶಗಳನ್ನು ನಾವು ಎಷ್ಟು ಪಾಲಿಸುತ್ತಿದ್ದೇವೆ? ನಾಯಕರನ್ನು ಆರಾಧನೆ ಮಾಡುವುದು ಸುಲಭ, ಆದರೆ ಅವರಂತೆ ನಡೆಯುವುದು ಕಷ್ಟ.

ಕಳೆದ ಕೆಲವು ದಿನಗಳ ಹಿಂದೆ ನಾವು ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರ ಜನ್ಮ ದಿನಾಚರಣೆಯನ್ನು ಬಹಳ ಅದ್ದೂರಿಯಾಗಿ ಆಚರಿಸಿದೆವು. ಡಾ. ಅಂಬೇಡ್ಕರ್ ಅವರು ಕೇವಲ ಒಂದು ಸಮಾಜದ ವ್ಯಕ್ತಿ ಅಥವಾ ರಾಜಕಾರಣಿ ಅಲ್ಲ. ಅವರು ಅತ್ಯಂತ ಸಂಕೀರ್ಣ ಸಮಾಜದಲ್ಲಿ ಹುಟ್ಟಿ, ಅನ್ಯಾಯದ ನಡುವೆಯೂ ತಮ್ಮನ್ನು ರೂಪಿಸಿಕೊಂಡರು. ಅವರು ಜ್ಞಾನದ ಬೆಳಕಿನಿಂದ ಸಮಾಜಕ್ಕೆ ದಾರಿ ತೋರಿಸಿದ ದೀಪ. ಅವರು ರೂಪಿಸಿದ ಭಾರತೀಯ ಸಂವಿಧಾನ, ಇಂದು ನಮ್ಮ ಎಲ್ಲರ ಜೀವನವನ್ನು ರೂಪಿಸುತ್ತಿದೆ. ಪ್ರತಿಯೊಬ್ಬನಿಗೂ ಸಮಾನ ಹಕ್ಕು ನೀಡಬೇಕು ಎಂಬುದು ಅಂಬೇಡ್ಕರ್ ಅವರ ಕನಸು. ಆದರೆ ಇಂದು ಅವರ ಹೆಸರು ಮಾತ್ರ ಉಪಯೋಗಿಸಿ, ಅವರ ತತ್ವಗಳನ್ನು ಮರೆತಿರುವುದು ದುರಂತವಾಗಿದೆ.

ಇಂದು ರಾಜಕೀಯ ನಾಯಕರಾಗಿ ಕಾಣಿಸಿಕೊಳ್ಳುವವರು ಅಂಬೇಡ್ಕರ್ ಅವರ ಭಾವಚಿತ್ರಗಳ ಮುಂದೆ ನಮಿಸೋದು, ಅವರ ಹೆಸರಲ್ಲಿ ಮತಗಳನ್ನು ಕೇಳುವದು ಮಾತ್ರ ಮಾಡುತ್ತಿದ್ದಾರೆ. ಅವರ ಜೀವನ ಪಾಠಗಳನ್ನು ಪಠ್ಯಕ್ರಮದಲ್ಲಿ ಹಾಕುವುದು ಒಂದು ಕಡೆ. ಆದರೆ ಅನುಸರಿಸಬೇಕಾದದ್ದು ಅವರ ವ್ಯಕ್ತಿತ್ವ ಮತ್ತು ತತ್ವಶಕ್ತಿಯನ್ನು.

ಅಂತೆಯೇ, ಇಂದು ನಾವು ಅಂಬೇಡ್ಕರ್ ಅವರ ತತ್ವಗಳನ್ನು ನಮ್ಮ ಜೀವನದ ಭಾಗವನ್ನಾಗಿ ಮಾಡಿಕೊಂಡಾಗ ಮಾತ್ರ ಅವರಿಗೆ ನಿಜವಾದ ಗೌರವವನ್ನು ತೋರಿಸಿದಂತೆ ಆಗುತ್ತದೆ. ನಾವು ಸಮಾಜಕ್ಕೆ ಒಳಿತಾಗುವ ಕೆಲಸಗಳಲ್ಲಿ ತೊಡಗಬೇಕಾಗಿದೆ. ಅಂಬೇಡ್ಕರ್ ಅವರ ಜೀವನವೇ ಒಂದು ಗ್ರಂಥ. ಅದನ್ನು ಪೂಜಿಸಬೇಡಿ, ಅದನ್ನು ಓದಿ, ಅರಿತು, ಅನುಸರಿಸಿ. ಅದು ಅವರಿಗೆ ನಾವು ನೀಡುವ ನಿಜವಾದ ಗೌರವ.

ಪ್ರಮುಖವಾಗಿ, ಇತ್ತೀಚಿನ ದಿನಗಳಲ್ಲಿ ನಾವು ಕಾಣುತ್ತಿರುವುದೇನೆಂದರೆ, ಒಬ್ಬ ಮಹಾನ್ ವ್ಯಕ್ತಿಯನ್ನು ಒಂದು ಸಮುದಾಯಕ್ಕೆ ಮಾತ್ರ ಸೇರ್ಪಡೆ ಮಾಡಲಾಗುತ್ತಿದೆ. ಅಂಬೇಡ್ಕರ್‌ರವರು ದಲಿತರ ಹೆಸರಿನಲ್ಲಿ ಮಾತ್ರ, ಬಸವಣ್ಣ ಲಿಂಗಾಯತ ಸಮುದಾಯಕ್ಕೆ ಮಾತ್ರ, ಶ್ರೀ ಶಂಕರಾಚಾರ್ಯರು ಬ್ರಾಹ್ಮಣರಿಗೆ ಮಾತ್ರ, ಕನಕದಾಸರು ಕುರುಬರಿಗೆ, ಹೇಮರೆಡ್ಡಿ ಮಲ್ಲಮ್ಮ ರೆಡ್ಡಿ ಸಮುದಾಯಕ್ಕೆ ಮಾತ್ರ ಎಂದು ಈ ಮಹಾನ್ ವ್ಯಕ್ತಿಗಳನ್ನು ಜಾತಿಗಳಿಗೆ ಸೀಮಿತಗೊಳಿಸುವುದು ಸರಿಯಲ್ಲ. ಅವರು ಎಲ್ಲರಿಗಾಗಿಯೂ ಇದ್ದವರು. ಅವರು ಜಾತಿಗೆ ಸೀಮಿತವಲ್ಲ, ಮಾನವ ಕುಲಕ್ಕೆ ಮೀಸಲು.

ಅವರು ತನ್ನನ್ನು ಮೀರಿ ಇತರರ ಬಗ್ಗೆ ಚಿಂತಿಸಿದವರು. ಅವರು ಸಮಾಜದ ಒಳಿತಿಗಾಗಿ ಬಾಳಿದವರು. ಅವರು ಜನ್ಮದಿಂದ ಮಹಾನ್ ಅಲ್ಲ, ಜೀವಿತದಿಂದ ಮಹಾನ್. ಸ್ವಾಮಿ ವಿವೇಕಾನಂದರ ಭವತೇಜಸ್ಸು, ಅವರ ಮೌಲ್ಯಪೂರ್ಣ ಭಾಷಣಗಳು ಇವು ಸಕಲ ಯುವಜನತೆಗೆ ಪ್ರೇರಣೆಯಾದವು. ಅವರು ಯಾವುದಾದರೂ ಒಂದು ಜಾತಿಗೆ ಸೇರಿದವರಲ್ಲ, ಅವರ ತತ್ವಗಳು ಎಲ್ಲರಿಗೂ ಸೇರಿವೆ. ಡಾ. ಅಬ್ದುಲ್ ಕಲಾಂ ಮುಸ್ಲಿಮರಾಗಿದ್ದರು. ಆದರೆ ಅವರು ಯಾವ ಧರ್ಮಕ್ಕೆ ಸೇರಿದವರಾದರೂ, ಅವರು ಪ್ರತಿನಿಧಿಸಿದ ಮೌಲ್ಯಗಳು ಧರ್ಮಾತೀತ.

ಹೀಗಿರುವಾಗ, ಇಂತಹ ವ್ಯಕ್ತಿತ್ವಗಳನ್ನು ಜಾತಿಗಳ ಫ್ರೇಮಿನಲ್ಲಿ ಹಾಕುವುದು ಸರಿಯೇ? ಬದಲಾಗಿ, ಅವರನ್ನು ಪೂಜಿಸೋಣ. ಆದರೆ ಜಾತಿ ಮಾಡುವ ದೇವರಾಗಿ ಅಲ್ಲ, ಮೌಲ್ಯಗಳನ್ನು ಬಿತ್ತಿದ ದೀಪವಾಗಿ. ಅವರ ಜೀವನವನ್ನು ಒಪ್ಪೋಣ. ಆದರೆ, ನಮ್ಮ ಸಮುದಾಯಕ್ಕೆ ಗೌರವ ತರುವ ಮಾರ್ಗವಾಗಿ ಅಲ್ಲ, ಮಾನವತೆಯ ದಾರಿ ತೋರುವ ದೀಪವಾಗಿ. ಇನ್ನು ಮುಂದೆ ನಾವು ನಾಯಕರಿಗೆ ಹಾರ ಹಾಕುವದರೊಂದಿಗೆ ಅವರ ಹಾದಿಯಲ್ಲಿ ನಡೆಯೋಣ. ಅದೇ ನಿಜವಾದ ಗೌರವ, ಅದೇ ನಿಜವಾದ ಭಾರತ.

**– ರವಿ ಹೊಂಬಾಳಿ.**
ಹವ್ಯಾಸಿ ಬರಹಗಾರರು,
ಗದಗ.

---

## ಸ್ವಾಭಿಮಾನಿ ಕರವೇ ಬಾಗಲಕೋಟ ಪದಾಧಿಕಾರಿಗಳ ಆಯ್ಕೆ




■ ವಿಜಯಸಾಕ್ಷಿ ಸುದ್ದಿ, ಗದಗ

ಸ್ವಾಭಿಮಾನಿ ಕರ್ನಾಟಕ ರಕ್ಷಣಾ ವೇದಿಕೆಯ ಬಾಗಲಕೋಟ ಜಿಲ್ಲಾ ಘಟಕದ ಪದಾಧಿಕಾರಿಗಳನ್ನು ವೇದಿಕೆಯ ಅಧ್ಯಕ್ಷ ಎಂ.ಎ. ಕುರ್ತಕೋಟಿ ಅವರ ನೇತೃತ್ವದಲ್ಲಿ ಬಾಗಲಕೋಟೆಯ ಹಳೆಯ ಪ್ರವಾಸಿ ಮಂದಿರದಲ್ಲಿ ಆಯ್ಕೆ ಮಾಡಲಾಯಿತು.

ಬಾಗಲಕೋಟ ಜಿಲ್ಲಾಧ್ಯಕ್ಷರಾಗಿ ಅಲ್ತಾಫಹುಸೇನ ಇಮಾಮಹುಸೇನ ಬೇನುರ ಇವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು. ಬಾಗಲಕೋಟ ಜಿಲ್ಲಾ ಕಾರ್ಯಾಧ್ಯಕ್ಷರಾಗಿ ಡಾ. ಕೆ.ಎಚ್. ಮುಲ್ಲಾ ಅವರನ್ನು ನೇಮಕ ಮಾಡಲಾಯಿತು.

ನೂತನ ಜಿಲ್ಲಾಧ್ಯಕ್ಷ ಇಮಾಮಹುಸೇನ ಬೇನುರ ಮಾತನಾಡಿ, ಉತ್ತರ ಕರ್ನಾಟಕ ಅಧ್ಯಕ್ಷರಾದ ಎಂ.ಎ. ಕುರ್ತಕೋಟಿ ಅವರು ವಿಶ್ವಾಸವಿಟ್ಟು ಆಯ್ಕೆ ಮಾಡಿದ್ದಕ್ಕೆ ಧನ್ಯವಾದಗಳನ್ನು ತಿಳಿಸಿ, ಬಾಗಲಕೋಟೆ ಜಿಲ್ಲೆಯಲ್ಲಿ ಸ್ವಾಭಿಮಾನಿ ಕರವೇ ಸಂಘಟನೆಯನ್ನು ಬಲಿಷ್ಠಗೊಳಿಸಿ ಕನ್ನಡ ನಾಡು, ನುಡಿ, ಭಾಷೆ, ನೆಲ, ಜಲಕ್ಕಾಗಿ ಹಾಗೂ ಬಡವರ ಮತ್ತು ಶೋಷಿತ ಸಮುದಾಯದವರ ಹಾಗೂ ಅನ್ಯಾಯ ವಿರುದ್ಧ ಯಾವುದೇ ಹೋರಾಟದಲ್ಲಿ ಸಂಪೂರ್ಣವಾಗಿ ಭಾಗಿಯಾಗಿ ಶ್ರಮಿಸುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಸೋಹಿಲ್ ಬಸೀರಸಾಬ ಥಾಲಾಯತ, ಮಂಜುನಾಥ ಹಳವಾರ, ಶಕೀಲ್ ಇಂದಿಕರ, ಅಲ್ತಾಫ ಗುಡೇಕರ, ಜಾವೀದ ಕುಂಟುಜಿ, ಈರಣ್ಣ ಪೂಜಾರಿ, ಹಜರುದ್ದೀನ ಥಾಲಾಯತ, ಸಮೀರ ಮುಲ್ಲಾ, ಅಲ್ತಾಫ ಶಹಾಪೂರ, ವಿನೋದ ಡೆಂಗಿ, ಸಲೀಮ ಥಾಲಾಯತ, ಅಸ್ಲಂ ಥಾಲಾಯತ, ತನ್ವೀರ ಮುಲ್ಲಾ, ಮೆಹಬೂಬ ಕಮತಗಿ, ರಾಜಾಸಾಬ ಬೆಂಗಳೂರ ಮುಂತಾದವರಿದ್ದರು.

---

### ಧಾರವಾಡ ತಾಲೂಕಾ ಗ್ಯಾರಂಟಿ ಸಮಿತಿ ಸಭೆಯಲ್ಲಿ ಅಧ್ಯಕ್ಷ ಅರವಿಂದ ಏಗನಗೌಡರ

# ಪ್ರತಿ ಗ್ರಾ.ಪಂಗಳಲ್ಲಿಯೂ ಗ್ಯಾರಂಟಿ ಸಭೆ ಆಯೋಜನೆ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡ ತಾಲೂಕಾ ಗ್ಯಾರಂಟಿ ಸಮಿತಿ ಸಭೆಯು ಶುಕ್ರವಾರ ಬೆಳಿಗ್ಗೆ ತಾಲೂಕು ಪಂಚಾಯತ ಸಭಾಂಗಣದಲ್ಲಿ ಸಮಿತಿ ಅಧ್ಯಕ್ಷ ಅರವಿಂದ ಏಗನಗೌಡರ ಅವರ ಅಧ್ಯಕ್ಷತೆಯಲ್ಲಿ ಜರುಗಿತು.

ಸಭೆಯಲ್ಲಿ ಮಾಹಿತಿ ಪಡೆದ ನಂತರ ಅಧ್ಯಕ್ಷ ಅರವಿಂದ ಏಗನಗೌಡರ ಮಾತನಾಡಿ, ಗ್ಯಾರಂಟಿ ಯೋಜನೆಯ ಅನುಕೂಲತೆಗಳನ್ನು ಇನ್ನೂ ಹೆಚ್ಚು ಪರಿಣಾಮಕಾರಿಯಾಗಿ ಸಾರ್ವಜನಿಕರಿಗೆ ತಲುಪಿಸಲು ಗ್ಯಾರಂಟಿ ಯೋಜನೆಯ ಸಭೆಯನ್ನು ಪ್ರತಿ ಗ್ರಾಮ ಪಂಚಾಯಿತಿವಾರು ಆಯಾ ಗ್ರಾಮಗಳಲ್ಲಿ ಆಯೋಜಿಸಲಾಗುವುದು ಎಂದು ತಿಳಿಸಿದರು.




ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಧಾರವಾಡ ಘಟಕ ವ್ಯವಸ್ಥಾಪಕರು ಮಾತನಾಡಿ, ಶಕ್ತಿ ಯೋಜನೆಯಡಿಯಲ್ಲಿ ಮಾರ್ಚ್ ತಿಂಗಳಲ್ಲಿ ಒಟ್ಟು 32,99,309 ಮಹಿಳಾ ಪ್ರಯಾಣಿಕರು ಪ್ರಯಾಣಿಸಿದ್ದಾರೆ. ಈ ವಧಿಯಲ್ಲಿ ಮಹಿಳಾ ಪ್ರಯಾಣಿಕರಿಂದ ರೂ, 4,77,62,102ಗಳಷ್ಟು ಆದಾಯ ಜಮೆ ಆಗಿದೆ ಎಂದು ತಿಳಿಸಿದರು.

ಧಾರವಾಡ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಮಾತನಾಡಿ, ಗೃಹಲಕ್ಷ್ಮೀ ಯೋಜನೆಯಡಿಯಲ್ಲಿ ಫಲಾನುಭವಿ ಪಡಿತರದಾರರ ಸಂಖ್ಯೆ-53543, ಯೋಜನೆಗೆ ನೋಂದಣಿಯಾದ ಫಲಾನುಭವಿಗಳ ಸಂಖ್ಯೆ-53364 ಇದ್ದು, ಈ ಎಲ್ಲ ಅರ್ಹ ಫಲಾನುಭವಿಗಳು ಗೃಹಲಕ್ಷ್ಮೀ ಯೋಜನೆಯ ಸೌಲಭ್ಯವನ್ನು ಪಡೆದುಕೊಂಡಿದ್ದಾರೆ. ಅದರಂತೆ ಸದರಿ ಫಲಾನುಭವಿಗಳಿಗೆ ಹಣ ಸಂದಾಯವಾಗಿದೆ ಎಂದು ಸಭೆಗೆ ತಿಳಿಸಿದರು.

ಹೆಸ್ಕಾಂ ಧಾರವಾಡ (ಶಹರ) ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಮಾತನಾಡಿ, ಗೃಹಜ್ಯೋತಿ ಯೋಜನೆಯಡಿಯಲ್ಲಿ ಧಾರವಾಡ ಶಹರದ ವ್ಯಾಪ್ತಿಯಲ್ಲಿ ಒಟ್ಟು 32066 ಜನ ಗೃಹಜ್ಯೋತಿ ಬಳಕೆದಾರ ಅರ್ಹ ಫಲಾನುಭವಿಗಳಿದ್ದಾರೆ. ಈ ಯೋಜನೆಯಡಿ ಮಾರ್ಚ್-2025ರ ಅಂತ್ಯಕ್ಕೆ ರೂ 2288.8 ಲಕ್ಷಗಳಷ್ಟು ಖರ್ಚಾಗಿದೆ ಎಂದು ತಿಳಿಸಿದರು.

ಹೆಸ್ಕಾಂ ಧಾರವಾಡ (ಗ್ರಾಮೀಣ) ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಮಾತನಾಡಿ, ಗೃಹಜ್ಯೋತಿ ಯೋಜನೆಯಡಿಯಲ್ಲಿ ಧಾರವಾಡ ಗ್ರಾಮೀಣ ವ್ಯಾಪ್ತಿಯಲ್ಲಿ ಒಟ್ಟು 55177 ಗೃಹಜ್ಯೋತಿ ಬಳಕೆದಾರ ಅರ್ಹ ಫಲಾನುಭವಿಗಳಿದ್ದಾರೆ. ಜುಲೈ 01, 2023ರಿಂದ ಇಲ್ಲಿಯವರೆಗೆ ಈ ಯೋಜನೆಯಡಿ 3090.41 ಲಕ್ಷ ರೂ.ಗಳಷ್ಟು ಖರ್ಚಾಗಿರುತ್ತದೆ ಎಂದು ತಿಳಿಸಿದರು.

ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಅಧಿಕಾರಿ ಮಾತನಾಡಿ, ಯುವ ನಿಧಿ ಯೋಜನೆಯಡಿ ಒಟ್ಟು 2503 ಜನ ಅಭ್ಯರ್ಥಿಗಳು ಆಯ್ಕೆ ಆಗಿದ್ದಾರೆ. ಧಾರವಾಡ ತಾಲೂಕಿನ ಒಟ್ಟು1704 ಫಲಾನುಭವಿಗಳ ಭಾಕಿ 799 ಪದವಿ ವಿದ್ಯಾರ್ಥಿಗಳಿಗೆ ಸಂದಾಯವಾದ ವೆಚ್ಚ ರೂ, 2,40,06,000 ಮತ್ತು ಡಿಪ್ಲೋಮಾ ವಿದ್ಯಾರ್ಥಿಗಳಿಗೆ 1,48,500, ಒಟ್ಟಾರೆ ಸದರಿ ವಿದ್ಯಾರ್ಥಿಗಳಿಗೆ ರೂ. 2,41,54,500 ನೀಡಲಾಗಿದೆ ಎಂದರು.

ಸಭೆಯಲ್ಲಿ ತಾಲೂಕು ಗ್ಯಾರಂಟಿ ಯೋಜನಾ ಅನುಷ್ಠಾನ ಸಮಿತಿಯ ಸರ್ವ ಸದಸ್ಯರು, ತಹಸೀಲ್ದಾರ್ ಡಿ.ಎಚ್. ಹೂಗಾರ, ಸಮಿತಿಯ ಸದಸ್ಯ ಕಾರ್ಯದರ್ಶಿ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಗಂಗಾಧರ ಕಂದಕೂರ ಹಾಗೂ ಧಾರವಾಡ ಗ್ಯಾರಂಟಿ ಯೋಜನೆ ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

ಅನ್ನಭಾಗ್ಯ ಯೋಜನೆಯ ಪ್ರಗತಿ ಕುರಿತು, ಧಾರವಾಡ ತಾಲೂಕು ಆಹಾರ ವಿಭಾಗದ ತಹಸೀಲ್ದಾರರು ಮಾತನಾಡಿ, ಧಾರವಾಡ ತಾಲೂಕಿನ ಗ್ರಾಮೀಣ ಭಾಗದಲ್ಲಿ ಅನ್ನಭಾಗ್ಯ ಯೋಜನೆಯಡಿಯಲ್ಲಿ ಒಟ್ಟು 53036 ಪಡಿತರ ಚೀಟಿಗಳಿದ್ದು, ಒಟ್ಟು 70 ನ್ಯಾಯಬೆಲೆ ಅಂಗಡಿಗಳು ಕಾರ್ಯನಿರ್ವಹಿಸುತ್ತಿವೆ. ಪೆಬ್ರುವರಿ-2025ರಿಂದ ಸರ್ಕಾರದ ಆದೇಶದ ಪ್ರಕಾರ 5 ಕೆ.ಜಿ ಅಕ್ಕಿಯನ್ನು ನೀಡಲಾಗುತ್ತಿದೆ ಎಂದರು.

---

## ಎಟಿಎಮ್‌ನಿಂದ 18 ಲಕ್ಷ ರೂ ಕದ್ದಿದ್ದ ಅಂತರರಾಜ್ಯ ಕಳ್ಳರ ಮೇಲೆ ಪೊಲೀಸ್ ಫೈರಿಂಗ್!

■ ವಿಜಯಸಾಕ್ಷಿ ಸುದ್ದಿ, ಕಲಬುರಗಿ

ಎರಡು ವಾರಗಳ ಹಿಂದೆ ಎಟಿಎಂ ದರೋಡೆ ಮಾಡಿದ್ದ ಆರೋಪಿಗಳ ಮೇಲೆ ಖಾಕಿ ಫೈರಿಂಗ್ ಮಾಡಿ ಬಂಧಿಸುವಲ್ಲಿ ಯಶಸ್ವಿಯಾಗಿದೆ.

ಆರೋಪಿಗಳು ಕಲಬುರಗಿ ಜಿಲ್ಲೆಯ ರಾಮನಗರ ಬಡಾವಣೆಯ ಎಸ್‌ಬಿಐ ಎಟಿಎಂನಿಂದ 18 ಲಕ್ಷ ರೂ. ಹಣವನ್ನು ದೋಚಿದ್ದರು. ದರೋಡೆಕೋರರನ್ನು ಪೊಲೀಸರು ಬಂಧಿಸಲು ಹೋದಾಗ ಹಲ್ಲೆಗೆ ಯತ್ನಿಸಿದ್ದಾರೆ. ಈ ವೇಳೆ ಪೊಲೀಸರು ಆತ್ಮರಕ್ಷಣೆಗಾಗಿ ಹರಿಯಾಣ ಮೂಲದ ಆರೋಪಿಗಳಾದ ತಸ್ಲಿಂ ಹಾಗೂ ಶರೀಫ್ ಕಾಲಿಗೆ ಗುಂಡು ಹಾರಿಸಿದ್ದಾರೆ. ಘಟನೆಯಲ್ಲಿ ಪಿಎಸ್‌ಐ ಬಸವರಾಜ್ ಹಾಗೂ ಇಬ್ಬರು ಪೊಲೀಸರಿಗೆ ಗಾಯಗಳಾಗಿದ್ದು, ಗಾಯಾಳುಗಳನ್ನು ಕಲಬುರಗಿ ಜಿಮ್ಸ್ ಆಸ್ಪತ್ರೆಗೆ ದಾಖಲಿಸಿದ್ದಾರೆ.

ಬಂಧಿತ ಆರೋಪಿಗಳಾದ ತಸ್ಲಿಂ ವಿರುದ್ಧ 8 ಪ್ರಕರಣಗಳು ಹಾಗೂ ಶರೀಫ್ ವಿರುದ್ಧ 3 ಪ್ರಕರಣ ದಾಖಲಾಗಿವೆ. ಈ ಗ್ಯಾಂಗ್ ಕರ್ನಾಟಕ ಸೇರಿ ವಿವಿಧ ರಾಜ್ಯಗಳಲ್ಲಿ ಎಟಿಎಂಗಳನ್ನೇ ಗುರಿಯಾಗಿಸಿಕೊಂಡು ದರೋಡೆ ಮಾಡುತ್ತಿದ್ದರು.

---

## ಯುದ್ಧ ಮಾಡುವ ಅಗತ್ಯ ಇಲ್ಲ, ಬಿಗಿ ಕ್ರಮಗಳನ್ನು ತೆಗೆದುಕೊಳ್ಳುವ ಅವಶ್ಯಕತೆ ಇದೆ: ಸಿಎಂ ಸಿದ್ದರಾಮಯ್ಯ

■ ವಿಜಯಸಾಕ್ಷಿ ಸುದ್ದಿ, ಮೈಸೂರು

ಯುದ್ಧ ಮಾಡುವ ಅಗತ್ಯ ಇಲ್ಲ, ಬಿಗಿ ಕ್ರಮಗಳನ್ನು ತೆಗೆದುಕೊಳ್ಳುವ ಅವಶ್ಯಕತೆ ಇದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ಟಿ. ಕೆ. ಲೇಔಟ್ ನಿವಾಸದ ಬಳಿ ಮಾತನಾಡಿದ ಅವರು, ಯುದ್ಧ ಮಾಡುವ ಅಗತ್ಯ ಇಲ್ಲ, ಬಿಗಿ ಕ್ರಮಗಳನ್ನು ತೆಗೆದುಕೊಳ್ಳುವ ಅವಶ್ಯಕತೆ ಇದೆ. ಭದ್ರತಾ ವ್ಯವಸ್ಥೆಯನ್ನು ಬಿಗಿ ಮಾಡುವ ಕೆಲಸವನ್ನು ಕೇಂದ್ರ ಸರ್ಕಾರ ಮಾಡಬೇಕು.

ನಾವು ಯುದ್ಧದ ಪರ ಇಲ್ಲ, ಶಾಂತಿ ಇರಬೇಕು, ಜನರಿಗೆ ಭದ್ರತೆ ಇರಬೇಕು ಆ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಕ್ರಮ ವಹಿಸಬೇಕು ಎಂದರು.

ಪಾಕ್ ಪ್ರಜೆಗಳನ್ನು ವಾಪಸ್ ಕಳುಹಿಸುವ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಈ ವಿಚಾರದಲ್ಲಿ ಕೇಂದ್ರಕ್ಕೆ ಸಹಕಾರ ನೀಡುತ್ತೇವೆ. ಇಲ್ಲಿ ಯಾರೆಲ್ಲೆ ಪಾಕಿಸ್ತಾನದ ಪ್ರಜೆಗಳಿದ್ದಾರೋ ಅವರ ಬಗ್ಗೆ ಕೇಂದ್ರಕ್ಕೆ ಮಾಹಿತಿ ಕೊಡುತ್ತೇವೆ ಎಂದು ಹೇಳಿದ್ದಾರೆ.

ಸಚಿವ ಸಂತೋಷ್ ಲಾಡ್ ಅವರು ಅಲ್ಲಿ ಸಿಲುಕಿರುವ ಎಲ್ಲಾ ಕನ್ನಡಿಗರನ್ನು ಕರೆದುಕೊಂಡು ಬಂದಿದ್ದಾರೆ. ಸದ್ಯ ನಾನು ಸಚಿವ ಸಂತೋಷ್ ಲಾಡ್ ಅವರಿಂದ ಮಾಹಿತಿ ಪಡೆದುಕೊಂಡಿಲ್ಲ. ಮಾಹಿತಿಯನ್ನ ಪಡೆದುಕೊಂಡ ನಂತರ ಇತರ ವಿಚಾರಗಳ ಬಗ್ಗೆ ಮಾತನಾಡುತ್ತೇನೆ ಎಂದು ತಿಳಿಸಿದರು.

---

## ಸಂವಿಧಾನ ಉಳಿಸುವ ತೀರ್ಮಾನ ಇತಿಹಾಸದ ಸುವರ್ಣಾಕ್ಷರಗಳಲ್ಲಿ ಬರೆಯಲ್ಪಡುತ್ತದೆ: ಜಿಗ್ನೇಶ್ ಮೇವಾನಿ

■ ವಿಜಯಸಾಕ್ಷಿ ಸುದ್ದಿ, ದಾವಣಗೆರೆ

"ಬಾಬಾಸಾಹೇಬರ ಸಮಾನತೆಯ, ಸಾಮಾಜಿಕ ನ್ಯಾಯದ ಆಶಯದ ಸಂವಿಧಾನದ ಮೇಲೆ ದಾಳಿ ಮಾಡಿ ಮುಗಿಸಲು ಕೆಲವರು ತೀರ್ಮಾನ ಮಾಡಿದ್ದಾರೆ. ಅದರ ವಿರುದ್ಧ ಸಂವಿಧಾನವನ್ನು ಉಳಿಸುವ ತೀರ್ಮಾನ ಮಾಡಿರುವ ನಿಮ್ಮ ಪ್ರಯತ್ನ ಇತಿಹಾಸದ ಸುವರ್ಣಾಕ್ಷರಗಳಲ್ಲಿ ಬರೆಯಲ್ಪಡುತ್ತದೆ" ಎಂದು ಗುಜರಾತ್ ರಾಜ್ಯದ ಕಾಂಗ್ರೆಸ್ ಶಾಸಕ ಜಿಗ್ನೇಶ್ ಮೇವಾನಿ ಸಂವಿಧಾನ ಸಂರಕ್ಷಣಾ ಸಮಾವೇಶ ಆಯೋಜಕರ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದರು.

"ಈ ಭಾರತ ಭೂಮಿ ಮೋದಿ, ಆರೆಸ್ಸೆಸ್, ಮೋಹನ್ ಭಾಗವತ್ ಅವರುಗಳ ದೇಶವ. ಇದು ಬಸವಣ್ಣ ಅವರ ದೇಶ, ಬಾಬಾಸಾಹೇಬರ ದೇಶ, ರವಿದಾಸ್ ಅವರ ದೇಶ, ಪೆರಿಯಾರ್ ಅವರ ದೇಶ, ಇಲ್ಲಿ ಭಗತ್ ಸಿಂಗ್, ಸುಖದೇವ್, ರಾಜಗುರು, ನಾರಾಯಣಗುರು, ಅಶ್ವಾಕುಲ್ಲ ಅವರುಗಳ ನೆಲ ಇದು. ಈ ದೇಶವನ್ನು ಉಳಿಸಲು ಯಾರೆಲ್ಲ ತ್ಯಾಗ ಮಾಡಿ ತಪಸ್ಸು ಮಾಡಿದರೋ, ಯಾವ ದೇಶದಲ್ಲಿ 23 ವರ್ಷದಲ್ಲಿ ಭಗತ್ ಸಿಂಗ್ ಪ್ರಾಣ ನೀಡಿದರೋ ಅಂತಹ ದೇಶವನ್ನು ಈಗ ಕೆಲವು ದಿನಗಳಿಂದ ಆಳುತ್ತಿರುವ ಇವರುಗಳ ವಶಕ್ಕೆ ಒಪ್ಪಿಸಲು ಸಾಧ್ಯವಿಲ್ಲ" ಎಂದರು.

"ಇಲ್ಲಿ ವೇದಿಕೆಯ ಮೇಲಿರುವವರು 50 ವರ್ಷಗಳಿಂದ ರೈತರು ಮತ್ತು ಕಾರ್ಮಿಕರಿಗಾಗಿ ಹೋರಾಟ ನಡೆಸುತ್ತಿರುವ ಜನರಿದ್ದಾರೆ, ಈಗ ಅದನ್ನು ಮುಂದಕ್ಕೆ ಒಯ್ಯುವ ಹೊಣೆ ನಮ್ಮ ಯುವತಲೆಮಾರಿನ ಹೆಗಲ ಮೇಲಿದೆ" ಎಂದರು ಹೇಳಿದರು.

"ಗುಜರಾತ್ ಗಲಭೆ ನಡೆಸುವ ಮೂಲಕ ಅಲ್ಪಸಂಖ್ಯಾತರ ಮಾರಣಹೋಮ ಸರ್ಕಾರದ ಮೂಗಿನ ಕೆಳಗೆ ನಡೆದು, ಇಡೀ ಪ್ರಪಂಚದ ಪ್ರಜ್ಞಾವಂತರು ಮೋದಿಯನ್ನು ಟೀಕಿಸಿದಾಗ, ಮೋದಿಯವರ ಸಲಹೆಗಾರರು ಹೇಳಿದರು,

---

### ದೇವಾಲಯಗಳ ಉದ್ಘಾಟನೆ, ಕಳಸಾರೋಹಣ ಕಾರ್ಯಕ್ರಮದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ದೇವರು, ಧರ್ಮದಲ್ಲಿ ನಂಬಿಕೆ ಇರಲಿ

■ ವಿಜಯಸಾಕ್ಷಿ ಸುದ್ದಿ, ನ್ಯಾಮತಿ

ಶಿವ ಶಕ್ತಿಯಿಂದ ಈ ಜಗತ್ತು ನಿರ್ಮಾಣಗೊಂಡಿದೆ. ದೇವರು ಕೊಟ್ಟ ಕೊಡುಗೆ ಅಮೂಲ್ಯ. ಅರಿವುಳ್ಳ ಮಾನವ ಜನ್ಮದಲ್ಲಿ ಹುಟ್ಟಿದ ಮೇಲೆ ಒಂದಿಷ್ಟಾದರೂ ಶಿವಧ್ಯಾನ ಮಾಡದಿದ್ದರೆ ಜೀವನ ನಿರರ್ಥಕ. ಸಂಸ್ಕಾರ ಕೊಡುವ ಶ್ರೀ ಗುರುವನ್ನು ನಿರ್ಲಕ್ಷ್ಯ ಮಾಡಬಾರದು. ದೇವರು ಮತ್ತು ಧರ್ಮದಲ್ಲಿ ಶ್ರದ್ಧೆಯಿಡಬೇಕೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ತಾಲೂಕಿನ ದೊಡ್ಡತ್ತಿನಹಳ್ಳಿ ಗ್ರಾಮದಲ್ಲಿ ಶ್ರೀ ಭದ್ರಕಾಳಿ ಸಮೇತ ಶ್ರೀ ವೀರಭದ್ರಸ್ವಾಮಿ ದೇವಸ್ಥಾನ ಮೊದಲ್ಗೊಂಡು ಇನ್ನಿತರ ದೇವಾಲಯಗಳ ಉದ್ಘಾಟನೆ, ಕಳಸಾರೋಹಣ ಅಂಗವಾಗಿ ಜರುಗಿದ ಇಷ್ಟಲಿಂಗ ಮಹಾಪೂಜಾ ಹಾಗೂ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ದೇವನೊಬ್ಬ-ನಾಮ ಹಲವು ಎಂಬ ಗಾದೆ ಮಾತಿನಂತೆ ಒಬ್ಬ ಭಗವಂತನಿಗೆ ಸಹಸ್ರಾರು ಹೆಸರುಗಳಿವೆ. ಯಾವ ಹೆಸರಿನಿಂದ ಕರೆದರೂ ಓಗೊಡುವ ಪರಮಾತ್ಮ ಒಬ್ಬನೇ ಆಗಿದ್ದಾನೆ ಎಂಬ ಪರಮ ಸತ್ಯವನ್ನು ಅರಿತು ಬಾಳಿದಾಗ ಎಲ್ಲೆಡೆ ಸಾಮರಸ್ಯ ಸೌಹಾರ್ದತೆ ಬೆಳೆದು ಬರಲು ಸಾಧ್ಯವಾಗುತ್ತದೆ. ಮನುಷ್ಯನ ಬುದ್ಧಿಶಕ್ತಿ ಬೆಳೆದಂತೆ ಭಾವನೆಗಳು ಬೆಳೆಯಲಾರದ ಕಾರಣ ಇಂದಿನ ಎಲ್ಲ ಅವಾಂತರಗಳಿಗೆ ಕಾರಣವೆಂದರೆ ತಪ್ಪಾಗದು. ದೇವರು ಧರ್ಮ ಜಾತಿ ಪ್ರಾಂತೀಯ ಹೆಸರಿನಲ್ಲಿ ಅನೇಕ ದುರಂತಗಳು ನಡೆಯುತ್ತಿರುವುದು ನೋವಿನ ಸಂಗತಿ.

ವೀರಶೈವ ಧರ್ಮದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರು ಜಾತಿ-ಮತ-ಪಂಥಗಳನ್ನು ಮೀರಿ ವಿಶ್ವಬಂಧುತ್ವದ ಆದರ್ಶ ಮೌಲ್ಯಗಳನ್ನು ಬೋಧಿಸಿದ್ದಾರೆ. ಬದುಕಿ ಬಾಳುವ ಜನಾಂಗಕ್ಕೆ ಅವರ ವಿಚಾರಧಾರೆಗಳು ದಾರಿ ದೀಪ. ದೊಡ್ಡತ್ತಿನಹಳ್ಳಿ ಗ್ರಾಮದಲ್ಲಿ ಭದ್ರಕಾಳಿ ಸಮೇತ ಶ್ರೀ ವೀರಭದ್ರೇಶ್ವರ ದೇವಸ್ಥಾನ ಮೊದಲ್ಗೊಂಡು ಹಲವಾರು ದೇವಾಲಯಗಳು ಪುನರ್ ನಿರ್ಮಿಸಿ, ಇಂದು ಲೋಕಾರ್ಪಣೆ ಮಾಡಿರುವುದು ಹೆಮ್ಮೆಯ ಸಂಗತಿ. ಜನ ಕಲ್ಯಾಣ ಸದುದ್ದೇಶದಿಂದ ಇಷ್ಟಲಿಂಗ ಮಹಾಪೂಜೆ ನೆರವೇರಿಸಿ ಸಕಲ ಭಕ್ತರಿಗೆ ಶುಭ ಹಾರೈಸಿದ್ದೇವೆ. ತಮ್ಮೆಲ್ಲರಲ್ಲಿ ಸ್ವಾಭಿಮಾನ ಧರ್ಮ ನಿಷ್ಠೆ ಇರುವುದನ್ನು ಕಂಡು ಸಂತೋಷವಾಗಿದೆ. ಬೆಳೆಯುತ್ತಿರುವ ಯುವ ಜನಾಂಗ ಧರ್ಮದ ದಾರಿಯಲ್ಲಿ ಮುನ್ನಡೆಯಬೇಕೆಂದು ನುಡಿದರು.



ಹೊನ್ನಾಳಿ ಶಾಸಕ ಜಿ.ಡಿ. ಶಾಂತನಗೌಡ್ರು ಸಮಾರಂಭ ಉದ್ಘಾಟಿಸಿ ಮಾತನಾಡಿ, ಹಿರಿಯರ ಆದರ್ಶ ಚಿಂತನೆಗಳು ಯುವ ಜನಾಂಗಕ್ಕೆ ಆಶಾಕಿರಣ. ಹೊಸ ಚಿಗುರು ಹಳೇ ಬೇರಿನಿಂದ ಮರಕ್ಕೆ ಶೋಭೆ ಬರುವಂತೆ ಹಳೆಯದು-ಹೊಸತು ಸೇರಿದರೆ ಉಜ್ವಲ ಬದುಕು ಪ್ರಾಪ್ತವಾಗುವುದರಲ್ಲಿ ಯಾವುದೇ ಸಂದೇಹ ಇಲ್ಲವೆಂದರು.

ಹೊನ್ನಾಳಿ ಹಿರೇಕಲ್ಮಠದ ಡಾ. ಒಡೆಯರ್ ಚೆನ್ನಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳು ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿ ವೀರಶೈವ ಧರ್ಮ ಸಂಸ್ಕೃತಿ ಮತ್ತು ಗುರು ಪರಂಪರೆಯ ಆದರ್ಶ ಮೌಲ್ಯಗಳನ್ನು ಪರಿಪಾಲಿಸಿಕೊಂಡು ಬರಬೇಕೆಂದರು.

ಹಾರನಹಳ್ಳಿ ರಾಮಲಿಂಗೇಶ್ವರ ಮಠದ ವಿಶ್ವಾರಾಧ್ಯ ಶಿವಾಚಾರ್ಯರು, ರಾಂಪುರದ ಶಿವಕುಮಾರ ಹಾಲಸ್ವಾಮಿಗಳು, ಗೋವಿನಕೆರೆ ವಿಶ್ವಾರಾಧ್ಯ ಹಾಲಸ್ವಾಮಿಗಳು, ನ್ಯಾಮತಿ ಕೋಹಳ್ಳಿ ಹಿರೇಮಠದ ಎಸ್.ಕೆ. ವಿಶ್ವಾರಾಧ್ಯ ಮೊದಲಾದ ಗಣ್ಯರು ಉಪಸ್ಥಿತರಿದ್ದರು. ನ್ಯಾಮತಿ ಬನಶಂಕರಿ ಮಹಿಳಾ ಬಳಗದವರಿಂದ ಪ್ರಾರ್ಥನೆ ಜರುಗಿತು. ಶಿವಮೊಗ್ಗದ ಶಾಂತಾ ಆನಂದ್ ನಿರೂಪಿಸಿದರು.

ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ ಮಾತನಾಡಿ, ದೊಡ್ಡತ್ತಿನಹಳ್ಳಿ ಯುವ ಜನತೆ ಅತ್ಯಂತ ಜವಾಬ್ದಾರಿಯಿಂದ ಕಾರ್ಯ ನಿರ್ವಹಿಸಿದ್ದು ಸಂತೋಷದ ವಿಚಾರ. ಇಂಥ ಮನೋಭಾವನೆ ಈ ಕಾರ್ಯಕ್ರಮಕ್ಕೆ ಅಷ್ಟೇ ಸೀಮಿತಗೊಳ್ಳಬಾರದು. ನಿರಂತರ ಬದುಕಿನಲ್ಲಿ ಗುರುವಿನ ಮಾರ್ಗದರ್ಶನ ಪಡೆದು ಸನ್ಮಾರ್ಗದಲ್ಲಿ ನಡೆಯಬೇಕೆಂದರು.

## ರಾಷ್ಟ್ರೀಯ 7ನೇ ಸುತ್ತಿನ ಕಾಲುಬಾಯಿ ಬೇನೆ ಲಸಿಕಾ ಕಾರ್ಯಕ್ರಮಕ್ಕೆ ಚಾಲನೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ತಾಲೂಕಿನಲ್ಲಿ ಎಪ್ರಿಲ್ 26 ರಿಂದ ಜೂನ 6 ರವರಗೆ ರಾಷ್ಟ್ರೀಯ ಏಳನೇ ಸುತ್ತಿನ ಕಾಲುಬಾಯಿ ಬೇನೆ ಲಸಿಕಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಶನಿವಾರದಂದು ಗದಗ ತಾಲೂಕಿನ ಬಿಂಕದಕಟ್ಟಿ ಗ್ರಾಮದಲ್ಲಿ ಗೋಪೂಜೆ ಮೂಲಕ ಏಳನೇ ಸುತ್ತಿನ ಕಾಲುಬಾಯಿ ಲಸಿಕಾ ಕಾರ್ಯಕ್ರಮವನ್ನು ಗ್ರಾಮ ಪಂಚಾಯತ್ ಅಧ್ಯಕ್ಷರಾದ ಶ್ರೀಮತಿ ತುಳಸಾ .ಎಸ್, ತಿಮ್ಮನಗೌಡ್ರು ಮತ್ತು ಮಾಜಿ ತಾಲೂಕ ಪಂಚಾಯತ್ ಅಧ್ಯಕ್ಷ ರವಿ.ಎಂ.ಮೂಲಿಮನಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಸದಸ್ಯರು, ಗ್ರಾಮದ ರೈತರು, ಹಿರಿಯರು ಉಪಸ್ಥಿತರಿದ್ದರು. ಪಶುಪಾಲನಾ ಇಲಾಖೆಯ ಉಪನಿರ್ದೇಶಕ ಡಾ.ಎಚ್. ನಾಗರಾಜ ನಾಯಕ, ಡಾ.ಹೀರಾಲಾಲ್. ಎಸ್. ಜನಗಿ, ಡಾ.ಜಗದೇಶ .ಎಸ್. ಮಟ್ಟಿ, ಡಾ. ವಿದ್ಯಾ.ಎಮ್ ಕಾಂತಿ, ಬಿ.ಟಿ, ಅರಕೇರಿ ಸೇರಿದಂತೆ ಇಲಾಖೆಯ ಸಿಬ್ಬಂದಿ ಹಾಗೂ ಪಶು ಸಖಿಯರು ಹಾಜರಿದ್ದರು.

### 2025ರ ಸಾಲಿನ ಬಾಲಕೃಷ್ಣ ಸಾಹಿತ್ಯ ಪುರಸ್ಕಾರ ಸ್ವೀಕರಿಸಿದ ಅನಂತ ದೇಶಪಾಂಡೆ ನುಡಿ


## 'ಬಾಲಕೃಷ್ಣ ಸಾಹಿತ್ಯ ಪುರಸ್ಕಾರ' ಉತ್ಸಾಹ ಹೆಚ್ಚಿಸಿದೆ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಗ್ರಾಮೀಣ ಭಾಗದಲ್ಲಿ ಬಾಲಕೃಷ್ಣ ಸಾಹಿತ್ಯ ವೇದಿಕೆ ಉತ್ತಮವಾದ ಸಾಹಿತ್ತಿಕ ಕಾರ್ಯಗಳ ಮೂಲಕ ಜನಮಾನಸದಲ್ಲಿ ತನ್ನ ಛಾಪನ್ನು ಮೂಡಿಸಿದೆ. ಇಂದು ಬಾಲಕೃಷ್ಣ ಸಾಹಿತ್ಯ ಪುರಸ್ಕಾರ ಪಡೆದ ನನ್ನಲ್ಲಿ ಉತ್ಸಾಹ ಹೆಚ್ಚಿದೆ ಎಂದು ಕಲಾವಿದ ಅನಂತ ದೇಶಪಾಂಡೆ ಹೇಳಿದರು.

ಪಟ್ಟಣದ ಶ್ರೀ ಅನ್ನದಾನೇಶ್ವರ ಪದವಿ ಮಹಾವಿದ್ಯಾಲಯದ ಸಭಾಂಗಣದಲ್ಲಿ ಜರುಗಿದ 2025ರ ಸಾಲಿನ ಬಾಲಕೃಷ್ಣ ಸಾಹಿತ್ಯ ಪುರಸ್ಕಾರ ಸ್ವೀಕರಿಸಿ ಅವರು ಮಾತನಾಡಿದರು.

ಬೇಂದ್ರೆಯವರ ಜೀವನವೇ ಒಂದು ಹಾಡಾಗಿತ್ತು. ಬೆಂದು–ನೊಂದು ಬೇಂದ್ರೆ ರಚಿಸಿದ ಹಾಡುಗಳು ಇಂದಿಗೂ ಜನರ ಮನದಲ್ಲಿ ಅಚ್ಚಳಿಯದೆ ಉಳಿದಿವೆ ಎಂದರು. ನಂತರ ಅವರು ನೀಡಿದ ಬೇಂದ್ರೆ ದರ್ಶನ ಕಾರ್ಯಕ್ರಮ ಸರ್ವರ ಮನ ಸೂರೆಗೊಂಡಿತು.



ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಸಾಹಿತಿ ಡಾ. ಶ್ಯಾಮಸುಂದರ ಬಿದರಕುಂದಿ, ಇಂದಿಗೂ ಬೇಂದ್ರೆ ಸಾಹಿತ್ಯ ತನ್ನತನವನ್ನು ಕಳೆದುಕೊಂಡಿಲ್ಲ. ಪ್ರತಿಬಾರಿ ಓದಿದಾಗಲೂ ಅದು ಹೊಸ ಹೊಸ ಅರ್ಥವನ್ನೇ ಕೊಡುತ್ತದೆ. ಇಂದಿನ ದಿನಗಳಲ್ಲಿ ರಾಜಕಾರಣ ಮಾಡುತ್ತಿರುವವರು ಬಿಡುವು ಮಾಡಿಕೊಂಡು ಬೇಂದ್ರೆ ಸಾಹಿತ್ಯವನ್ನು ಓದಿದ್ದೇ ಆದರೆ ಈಗಿನ ದಿನಗಳಲ್ಲಿ ನಡೆಯುತ್ತಿರುವ ಅನರ್ಥಗಳನ್ನೆಲ್ಲ ತಡೆಯಬಹುದೆಂದರು.

ಅಧ್ಯಕ್ಷತೆ ವಹಿಸಿದ್ದ ಆರ್.ವ್ಹಿ. ಕುಲಕರ್ಣಿ ಮಾತನಾಡಿ, ಬಾಲಕೃಷ್ಣ ಸಾಹಿತ್ಯ ವೇದಿಕೆ ನಡೆದು ಬಂದ ದಾರಿಯನ್ನು ವಿವರಿಸಿ, ಒಬ್ಬ ಶಿಕ್ಷಕ ಸಾಮಾಜಿಕ ಕಳಕಳಿಯುಳ್ಳವನಾಗಿದ್ದರೆ ಏನೆಲ್ಲ ಕಾರ್ಯ ಸಾಧಿಸಲು ಸಾಧ್ಯ ಎಂಬುದಕ್ಕೆ ಬಾಲಕೃಷ್ಣ ಸಾಹಿತ್ಯ ವೇದಿಕೆಯೇ ಸಾಕ್ಷಿ. ಇಂದು ಈ ವೇದಿಕೆಯಡಿಯಲ್ಲಿ ಕಲಾವಿದ ದೇಶಪಾಂಡೆಯವರಿಗೆ ಪುರಸ್ಕಾರ ನೀಡಿದ್ದು ಸ್ತುತ್ಯ ಎಂದರು.

ವೇದಿಕೆಯ ಮೇಲೆ ಆಡಳಿತಾಧಿಕಾರಿ ಎನ್.ಆರ್. ಗೌಡರ, ಪ್ರಾಚಾರ್ಯ ಎಸ್.ಜಿ. ಕೇಶಣ್ಣವರ, ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ, ಬೀಚಿ ಬಳಗದ ಅಧ್ಯಕ್ಷ ಕೆ.ಎಸ್. ಕಳಕಣ್ಣವರ ಮತ್ತು ಅನೇಕ ಸಾಧಕರು ಉಪಸ್ಥಿತರಿದ್ದರು.

ವೇದಿಕೆಯ ಸಂಚಾಲಕ ಅರುಣ ಕುಲಕರ್ಣಿ ಸ್ವಾಗತಿಸಿದರು. ಅನಿಲ ವೈದ್ಯ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಎಂ.ವಿ. ವೀರಾಪೂರ ನಿರೂಪಿಸಿದರು. ಡಾ. ಕಲ್ಲಯ್ಯ ಹಿರೇಮಠ, ಎಂ.ಎಸ್. ದಢೇಸೂರಮಠ, ಸುರೇಶ ಹಳ್ಳಿಕೇರಿ ನಿರ್ವಹಿಸಿದರು. ಶಿವಯೋಗಿ ಜಕ್ಕಲಿ ವಂದಿಸಿದರು. ವಗಾಯಕಿ ರಾಜಶ್ರೀ ಕುಲಕರ್ಣಿ ಸಂಗೀತ ಸೇವೆ ನೀಡಿದರು. ಮಹೇಶ ಕಮ್ಮಾರ ಹಾರ್ಮೋನಿಯಂ, ಶರಣಪ್ಪ ಅರಮನಿ ತಬಲಾ ಸಾಥ ನೀಡಿದರು. ಸಮಾರಂಭದಲ್ಲಿ ನೂರಾರು ಸಾಹಿತ್ಯಾಸಕ್ತರು ಪಾಲ್ಗೊಂಡಿದ್ದರು.

> ದಿವ್ಯ ಸಾನ್ನಿಧ್ಯ ವಹಿಸಿದ್ದ ಶ್ರೀ ಮುಪ್ಪಿನ ಬಸವಲಿಂಗ ಸ್ವಾಮೀಜಿ ಆಶೀರ್ವಚನ ನೀಡಿ, ಸಾಹಿತ್ಯ ಮನಸ್ಸನ್ನು ಅರಳಿಸುತ್ತದೆ. ಅದರಲ್ಲೂ ಬೇಂದ್ರೆಯವರ ಸಾಹಿತ್ಯ ಓದುಗನ ಮನಸ್ಸನ್ನು ಅರಳಿಸುವಲ್ಲಿ ಮಹತ್ವದ ಪಾತ್ರವನ್ನು ವಹಿಸುತ್ತದೆ. ಬೇಂದ್ರೆ ದರ್ಶನದ ಮೂಲಕ ಬೇಂದ್ರೆಯವರನ್ನೇ ನಮ್ಮ ಕಣ್ಣ ಮುಂದೆ ತಂದು ನಿಲ್ಲಿಸಿದ ಅನಂತ ದೇಶಪಾಂಡೆಯವರ ಕಲೆ ನಿಜಕ್ಕೂ ಶ್ಲಾಘನೀಯ. ಇಂತಹ ಕಲಾವಿದರನ್ನು ಗುರುತಿಸಿ ಅವರಿಗೆ ಬಾಲಕೃಷ್ಣ ಸಾಹಿತ್ಯ ಪುರಸ್ಕಾರ ನೀಡಿದ ಬಾಲಕೃಷ್ಣ ಸಾಹಿತ್ಯ ವೇದಿಕೆಯ ಕಾರ್ಯದೊಂದಿಗೆ ನಾವೂ ಇರುವುದು ಹೆಮ್ಮೆಯ ವಿಚಾರ ಎಂದರು.

## ಉಗ್ರರ ದಾಳಿಗೆ ಕರವೇ ಖಂಡನೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದಿರುವ ಭಯೋತ್ಪಾದಕ ದಾಳಿಯನ್ನು ಖಂಡಿಸಿ ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣಶೆಟ್ಟಿ ಬಣದ ಗದಗ ಜಿಲ್ಲಾ ಘಟಕದ ಅಧ್ಯಕ್ಷ ವೆಂಕಟೇಶ ಬೇಲೂರ ನೇತೃತ್ವದಲ್ಲಿ ಗದಗ ಜಿಲ್ಲಾಧಿಕಾರಿಗಳ ಮುಖಾಂತರ ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ಗೃಹಮಂತ್ರಿ ಅಮಿತ್ ಶಾ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಮನವಿ ಸಲ್ಲಿಸಿ ವೆಂಕಟೇಶ ಬೇಲೂರ ಮಾತನಾಡಿ, ಜಮ್ಮು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರನ್ನು ಗುರಿಯಾಗಿಟ್ಟುಕೊಂಡು ನಡೆಸಿದ ದಾಳಿ ದೇಶವನ್ನೇ ಬೆಚ್ಚಿ ಬೀಳಿಸಿದೆ. ಹಿಂದೂಗಳ ಮೇಲೆ ನಡೆದಿರುವ ದಾಳಿ ಖಂಡನೀಯ ಎಂದು ಹೇಳಿದರು.

ರಾಜ್ಯ ಕಾರ್ಯಕಾರಿ ಸಮಿತಿಯ ಸದಸ್ಯ ದಾವಲಸಾಬ ಆರ್. ಮುಳಗುಂದ ಮಾತನಾಡಿ, ಶಾಂತವಾಗಿದ್ದ ಜಮ್ಮು ಕಾಶ್ಮೀರದಲ್ಲಿ ಮತ್ತೆ ರಕ್ತಪಾತ ನಡೆದಿರುವುದು ಖಂಡನೀಯ ಎಂದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶ್ರೀನಿವಾಸ ಕೆ.ಭಂಡಾರಿ, ಕಾರ್ಮಿಕ ಘಟಕದ ಗದಗ ಜಿಲ್ಲಾಧ್ಯಕ್ಷ ತಿಮ್ಮಣ್ಣ ಡೋಣಿ, ಜಿಲ್ಲಾ ವಕ್ತಾರ ಪರಶುರಾಮ ಬಂಕದಮನಿ, ಗದಗ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಸಹದೇವ ಕೋಟಿ, ಗದಗ ತಾಲೂಕಾಧ್ಯಕ್ಷ ಹನುಮಂತಸಾ ಶಿದ್ಲಿಂಗ, ಜಿಲ್ಲಾ ಕಾನೂನು ಸಲಹೆಗಾರ ಮಂಜುನಾಥ ಶಾಂತಗೇರಿ, ಜಿಲ್ಲಾ ಮುಖಂಡರಾದ ಮೈಲಾರಪ್ಪ ಕೋಟೆಪ್ಪನವರ, ಮಣಿಕಂತ ಭಂಡಾರಿ, ಶಂಕರ ದಹಿಂಡೆ, ವಾಸು ಹೂಗಾರ ಮುಂತಾದವರು ಉಪಸ್ಥಿತರಿದ್ದರು.

### ಧಾರವಾಡದ ಕೃಷಿ ವಿ.ವಿ ಕೃಷಿ ಹವಾಮಾನ ವಿಭಾಗದ ವಾರ್ಷಿಕ ತಾಂತ್ರಿಕ ಸಭೆ

## ಮುನ್ಸೂಚನೆಗಳ ನಿಖರತೆಯನ್ನು ಸುಧಾರಿಸಬೇಕಿದೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಧಾರವಾಡದ ಕೃಷಿ ಮಹಾವಿದ್ಯಾಲಯದ ಕೃಷಿ ಹವಾಮಾನ ವಿಭಾಗವು ಇತ್ತೀಚೆಗೆ ತನ್ನ ವಾರ್ಷಿಕ ತಾಂತ್ರಿಕ ಸಭೆಯನ್ನು ಆಯೋಜಿಸಿ, ಕೃಷಿಯಲ್ಲಿನ ಪ್ರಮುಖ ಹವಾಮಾನ ಮತ್ತು ಹವಾಮಾನ ಸಂಬಂಧಿತ ಸವಾಲುಗಳತ್ತ ಗಮನ ಸೆಳೆಯಿತು. ಕಾರ್ಯಕ್ರಮದಲ್ಲಿ ಧಾರವಾಡದ ಯುಎಎಸ್‌ನ ವಿಜ್ಞಾನಿಗಳು, ಹವಾಮಾನಶಾಸ್ತ್ರಜ್ಞರು ಮತ್ತು ತಾಂತ್ರಿಕ ಅಧಿಕಾರಿಗಳು ಭಾಗವಹಿಸಿದ್ದರು.

ವಿಜಯಪುರದ ಪ್ರಾದೇಶಿಕ ಕೃಷಿ ಸಂಶೋಧನ ಕೇಂದ್ರದ ಸಹ ಸಂಶೋಧನಾ ನಿರ್ದೇಶಕ ಡಾ. ಎಸ್.ಬಿ. ಜಗ್ಗಿನವರ ಮಾತನಾಡಿ, ಕೃಷಿಯಲ್ಲಿ ಹವಾಮಾನ ಮುನ್ಸೂಚನೆಯ ನಿರ್ಣಾಯಕ ಪಾತ್ರವನ್ನು ಒತ್ತಿ ಹೇಳಿದರಲ್ಲದೆ, ಸಮಯೋಚಿತ ಮತ್ತು ನಿಖರವಾದ ಹವಾಮಾನ ಮಾಹಿತಿಯು ರೈತರಿಗೆ ಕೃಷಿ ಚಟುವಟಿಕೆಯ ನಿರ್ಧಾರಗಳನ್ನು ತೆಗೆದುಕೊಳ್ಳಲು ಸಹಾಯಕವಾಗಿರುತ್ತದೆ. ಮುನ್ಸೂಚನೆಗಳ ನಿಖರತೆಯನ್ನು ಸುಧಾರಿಸುವ ಅಗತ್ಯವಿದೆ ಎಂದರು.




ಸಭೆಯ ಅಧ್ಯಕ್ಷತೆ ವಹಿಸಿದ್ದ ಡಾ. ಜೆ.ಎ. ಹೊಸ್ಮತ್, ಕೃಷಿಯ ಸಂದರ್ಭದಲ್ಲಿ 'ಮಳೆಯ ದಿನ' ಎಂದರೇನು ಎಂಬುದರ ಮರು ವ್ಯಾಖ್ಯಾನಕ್ಕೆ ಕರೆ ನೀಡಿ, ಪ್ರಸ್ತುತ, ಭಾರತ ಹವಾಮಾನ ಇಲಾಖೆಯು ಮಳೆಯ ದಿನವನ್ನು ಕನಿಷ್ಠ 2.5 ಮಿಮೀ ಮಳೆಯಾಗುವ ದಿನ ಎಂದು ವ್ಯಾಖ್ಯಾನಿಸುತ್ತದೆ. ಆದಾಗ್ಯೂ, ಹೆಚ್ಚುತ್ತಿರುವ ತಾಪಮಾನ ಮತ್ತು ಹೆಚ್ಚಿದ ಆವಿಯಾಗುವಿಕೆಯಿಂದಾಗಿ, ಈ ಪ್ರಮಾಣವು ಇನ್ನು ಮುಂದೆ ಕೃಷಿಗೆ ಅರ್ಥಪೂರ್ಣವಾಗಿಲ್ಲ ಎಂದು ಹೇಳಿದರು. ಕೃಷಿ ಹವಾಮಾನಶಾಸ್ತ್ರದ ಸಂಶೋಧನಾ ಚಟುವಟಿಕೆಗಳನ್ನು ಬಲಪಡಿಸಲು ಮತ್ತು ಈ ಪ್ರದೇಶದ ರೈತ ಸಮುದಾಯಗಳನ್ನು ಬೆಂಬಲಿಸಲು ಧಾರವಾಡದ ಯುಎಎಸ್ ಕ್ಯಾಂಪಸ್‌ನಲ್ಲಿ ಕೃಷಿ–ಹವಾಮಾನಶಾಸ್ತ್ರದ ಕುರಿತು ಎಐಸಿಆರ್‌ಪಿಯ ಹೊಸ ಸ್ವಯಂಸೇವಾ ಕೇಂದ್ರವನ್ನು (೦ಖಅಖಕಂಬ) ಸ್ಥಾಪಿಸಲು ಅವರು ಪ್ರಸ್ತಾಪಿಸಿದರು.

ಹವಾಮಾನಶಾಸ್ತ್ರದ ಸಹಾಯಕ ಪ್ರಾಧ್ಯಾಪಕ ಡಾ. ಸುಮೇಶ್ ಕೆ.ಜಿ., ಕರ್ನಾಟಕದಾದ್ಯಂತ ಎಲ್ಲಾ ರೀತಿಯ ಮಳೆ ವಿಶ್ಲೇಷಣೆಗಾಗಿ ಭರತ ಹವಾಮಾನ ಇಲಾಖೆಯ ಗ್ರಿಡಡ್ ಮಾಡಿದ ಮಳೆಯ ಡೇಟಾವನ್ನು ಬಳಸುವ ಮಹತ್ವದ ಬಗ್ಗೆ ಮಾತನಾಡಿದರು.

ಗ್ರಾಮೀಣ ಕೃಷಿ ಮೌಸಮ್ ಸೇವಾ ಘಟಕಗಳ ತಾಂತ್ರಿಕ ಅಧಿಕಾರಿಗಳಾದ ಸಂಜೀವ್ ಯಲೇದಹಳ್ಳಿ, ಸಿ.ಬಿ. ಕಬಡಗಿ (ಧಾರವಾಡ), ಮತ್ತು ಲಾವಣ್ಯ ಪಿ. (ವಿಜಯಪುರ) ಅವರು ಜಿಕೆಎಂಎಸ್ ಅಡಿಯಲ್ಲಿ ನಡೆಸಲಾದ ಚಟುವಟಿಕೆಗಳನ್ನು ಪ್ರಸ್ತುತಪಡಿಸಿದರು ಮತ್ತು ಗರಿಷ್ಠ ಸಂಖ್ಯೆಯ ರೈತರನ್ನು ತಲುಪಲು ಹವಾಮಾನ ಆಧಾರಿತ ಕೃಷಿ ಸಲಹೆಗಳನ್ನು ಉತ್ತೇಜಿಸುವಲ್ಲಿ ತಮ್ಮ ಅನುಭವಗಳನ್ನು ಹಂಚಿಕೊಂಡರು.

ಎನ್‌ಕೆಎಫ್‌ಸಿ ಧಾರವಾಡದ ಉಸ್ತುವಾರಿ ಅಧಿಕಾರಿ ಡಾ. ರಾಜು ರೋಖಡೆ ಅವರು ಕೃಷಿ ವಿಶ್ವವಿದ್ಯಾಲಯ ಆವರಣದಲ್ಲಿ ಸ್ಥಾಪಿತವಾಗಲಿರುವ ಖಂಆಂಖ ದ ಮಹತ್ವವನ್ನು ವಿವರಿಸಿದರು. ಜಿಕೆಎಂಎಸ್ ಧಾರವಾಡದ ಹವಾಮಾನ ವೀಕ್ಷಕ ಹನುಮಂತ ಎಚ್‌ಸಿ ಮತ್ತು ಇಲಾಖೆಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

> ವಿಜಯಪುರದ ಆರ್‌ಎಆರ್‌ಎಸ್‌ನ ಕೃಷಿ–ಹವಾಮಾನಶಾಸ್ತ್ರದ ಎಐಸಿಆರ್‌ಪಿ ಮುಖ್ಯಸ್ಥ ಡಾ. ಗುರು ಯಡಹಳ್ಳಿ ಮಾತನಾಡಿ, ಇತ್ತೀಚಿನ ವಿಶ್ವ ಹವಾಮಾನ ಸಂಸ್ಥೆಯ ಮಾರ್ಗಸೂಚಿಗಳ ಆಧಾರದ ಮೇಲೆ ಹವಾಮಾನ ಅಂಕಿ ಅಂಶಗಳ ಸಾಮಾನ್ಯತೆಯನ್ನು ನವೀಕರಿಸುವ ಅಗತ್ಯವನ್ನು ಸೂಚಿಸಿದರು.


### ಮುಂಬಯಿ ಸಾಹಿತ್ಯ ಸಮ್ಮೇಳನದಲ್ಲಿ ಸಾಹಿತಿ ಮಕಾನದಾರರ


## 'ಬದುಕು ಬರಹ' ಕೃತಿ ಲೋಕಾರ್ಪಣೆ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಕೇಂದ್ರ ಕನ್ನಡ ಸಾಹಿತ್ಯ ವೇದಿಕೆ ಬೆಂಗಳೂರು, ಕೇಂದ್ರ ಸಮಿತಿ ಹಾಸನ, ರಾಜ್ಯ ಘಟಕ ಮುಂಬಯಿ ಇವರ ಸಂಯುಕ್ತ ಆಶ್ರಯದಲ್ಲಿ ಅಖಿಲ ಭಾರತ ಪ್ರಥಮ ಕೇಂದ್ರ ಕನ್ನಡ ಸಾಹಿತ್ಯ ಸಮ್ಮೇಳನ ಎಪ್ರಿಲ್ 27ರ ಬೆಳಿಗ್ಗೆ ಮುಂಬಯಿಯಲ್ಲಿ ಜರುಗಲಿದೆ.

ಸಾಹಿತ್ಯ ಸಮ್ಮೇಳನದ ಸಂದರ್ಭದಲ್ಲಿ ಹಲವು ಮಹತ್ವದ ಕೃತಿಗಳು ಜನಾರ್ಪಣೆಗೊಳ್ಳಲಿದ್ದು, ಕುವೆಂಪು ವಿವಿ ಇತಿಹಾಸ ವಿಭಾಗದ ಡಾ. ಹಸೀನಾ ಎಚ್. ಕೆ ಮತ್ತು ಕೊಪ್ಪಳದ ಹಿರಿಯ ಸಾಹಿತಿ, ವಿಮರ್ಶಕ, ಶಿಕ್ಷಕರಾದ ರಾಮಣ್ಣ ಅಲ್ಮರ್ಸಿಕೇರಿಯವರ ಸಂಪಾದನೆಯಲ್ಲಿ ಪ್ರಕಟಗೊಂಡ ಹಿರಿಯ ಸಾಹಿತಿ ಎ.ಎಸ್. ಮಕಾನದಾರ ಅವರ ಬದುಕು–ಬರಹ ಕುರಿತ 'ಬೊಗಸೆಯೊಳಗಿನ ದರ್ದ್' ಮತ್ತು 'ಪ್ಯಾರಿ ಪದ್ಯ' ಸಂಕಲನದ ಕೊಂಕಣಿ, ದೇವನಾಗರಿ ಲಿಪಿ ಮತ್ತು ರೋಮನ್ ಭಾಷೆಗಳ ತ್ರಿಭಾಷಾ ಸಂಕಲನ 'ಪ್ಯಾರಿ ಪದಂ' ದಕ್ಷಿಣ ಕನ್ನಡ ಜಿಲ್ಲೆ ಪುತ್ತೂರಿನ ಶಿಕ್ಷಕಿ, ಅನುವಾದಕಿ, ಕವಯಿತ್ರಿ ಫ್ಲಾವಿಯಾ ಆಲ್ಬರ್ಕರ್ಕ್ ಅವರ ಅನುವಾದಿತ ಸಂಕಲನ, ಜೊತೆಗೆ ವಿಶ್ವೇಶ್ವರ ಎನ್. ಮೇಟಿಹಳ್ಳಿಯವರ ಹಳ್ಳಿಯ ಎಂಬ ಹಳ್ಳಿ, ತೋಳನೂರು ಒಂದು ಸಂಸ್ಕೃತಿಕ ಅಧ್ಯಯನ, ಕವಯಿತ್ರಿ ಶಿವಲೀಲಾ ಶಂಕರ್ ಅವರ 'ಬೇಲಿಯಾಚಿನ ಪಿಸುಮಾತು' ಕವನ ಸಂಕಲನಗಳನ್ನು ಖ್ಯಾತ ಪತ್ರಕರ್ತ, ವಿಮರ್ಶಕ ಶ್ರೀನಿವಾಸ್ ಜೋಕಟ್ಟೆಯವರು ಜನಾರ್ಪಣೆಗೊಳಿಸುವರು.




ಖ್ಯಾತ ಸಾಹಿತಿ, ವೈದ್ಯೆ ಡಾ. ಎಚ್.ಎಸ್. ಅನುಪಮಾ ಅವರು ಸಮ್ಮೇಳನ ಉದ್ಘಾಟಿಸುವರು. ಡಾ. ಪಿ. ನಾರಾಯಣ ದಿವಾಕರ್, ನಾಗರಾಜ್ ದೊಡ್ಡಮನಿ, ವಾಸು ಸಮುದ್ರವಳ್ಳಿ, ದೇಸು ಆಲೂರ್ ಮುಂತಾದವರು ಸಮ್ಮೇಳನದ ಸರ್ವಾಧ್ಯಕ್ಷ ಡಾ. ಜಿ.ಎನ್. ಉಪಾಧ್ಯರಿಗೆ ಗೌರವ ಸಮರ್ಪಿಸುವರು. ಇದೇ ಸಂದರ್ಭದಲ್ಲಿ ವಿಚಾರ ಸಂಕಿರಣ, ಕವಿಗೋಷ್ಠಿ, ಸಾಧಕರಿಗೆ ಸನ್ಮಾನ ಜರುಗಲಿದೆ ಎಂದು ಅಧ್ಯಕ್ಷ ಕೊಟ್ರೇಶ್ ಉಪ್ಪಾರ ತಿಳಿಸಿದ್ದಾರೆ.


## ಬಾಲ್ಯ ವಿವಾಹದಲ್ಲಿ ಶಾಸಕ, ಮಾಜಿ ಸಚಿವ ಭಾಗಿ!

**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಜಿಲ್ಲೆಯ ಕನಕಗಿರಿ ತಾಲೂಕಿನ ಹಳ್ಳಿಯೊಂದರಲ್ಲಿ ನಡೆದ ಬಾಲ್ಯ ವಿವಾಹದಲ್ಲಿ ಶಾಸಕ, ಮಾಜಿ ಸಚಿವ ಸೇರಿದಂತೆ ಅನೇಕ ಗಣ್ಯರು ಭಾಗಿಯಾಗಿರುವ ಫೋಟೋಗಳು ಶನಿವಾರ ವೈರಲ್ ಆಗಿವೆ.

ಬಳ್ಳಾರಿ ಜಿಲ್ಲೆಯ ಕಂಪ್ಲಿ ಶಾಸಕ ಗಣೇಶ ಹಾಗೂ ಜಿಲ್ಲೆಯ ಮಾಜಿ ಸಚಿವ ಮಲ್ಲಿಕಾರ್ಜುನ ನಾಗಪ್ಪ, ಹುಲಿಹೈದರ ಗ್ರಾಮದ ಮುಖಂಡ ಹನುಮೇಶ ನಾಯಕ ಸೇರಿ ಇನ್ನಿತರರು ಭಾಗಿಯಾಗಿರುವ ಫೋಟೋಗಳು ವೈರಲ್ ಆಗಿವೆ.

ಖುದ್ದು ಗ್ರಾಪಂ ಸದಸ್ಯನೇ ಮುಂದೆ ನಿಂತು ಮಾಡಿರುವ ಬಾಲ್ಯ ವಿವಾಹ ಇದಾಗಿದ್ದು, ಅನೇಕ ಗಣ್ಯರು ಪಾಲ್ಗೊಂಡಿದ್ದಾರೆ.




ಬಾಲ್ಯ ವಿವಾಹದ ಕುರಿತಂತೆ ಪ್ರಕರಣ ದಾಖಲಿಸದಂತೆ ಹಲವು ಜನಪ್ರತಿನಿಧಿಗಳು ಒತ್ತಡ ಹೇರಿದ್ದ ಆರೋಪ ಕೇಳಿ ಬಂದಿತ್ತು.

ಹೀಗಾಗಿಯೇ ಬಾಲ್ಯ ವಿವಾಹವಾದ ಎರಡು ದಿನದ ಬಳಿಕ ಶುಕ್ರವಾರ ಕನಕಗಿರಿ ಪೊಲೀಸ್ ಠಾಣೆಯಲ್ಲಿ ಮೂವರ ವಿರುದ್ಧ ಪ್ರಕರಣ ದಾಖಲಾಗಿತ್ತು.

ಇದೀಗ ಸದರಿ ಬಾಲ್ಯ ವಿವಾಹದಲ್ಲಿ ವಿವಿಧ ಜನಪ್ರತಿನಿಧಿಗಳು ಖುದ್ದು ಭಾಗವಹಿಸಿರುವುದು ಕಟು ಟೀಕೆಗೆ ಗುರಿಯಾಗಿದೆ.

## ಏಕಾಏಕಿ ಕಾರಿಗೆ ಬೆಂಕಿ: ಪ್ರಾಣಾಪಾಯದಿಂದ ಪಾರಾದ ಕುಟುಂಬ!



**■ವಿಜಯಸಾಕ್ಷಿ ಸುದ್ದಿ, ಗದಗ**

ಚಲಿಸುತ್ತಿದ್ದ ಕಾರಿಗೆ ಏಕಾಏಕಿ ಬೆಂಕಿ ಹೊತ್ತಿಕೊಂಡು ಕಾರು ಸುಟ್ಟು ಕರಕಲಾಗಿರುವ ಘಟನೆ ಗದಗ ತಾಲೂಕಿನ ನಾರಾಯಣಪೂರ ಗ್ರಾಮದ ಬಳಿ ನಡೆದಿದೆ.

ಡಿ ಆರ್ ಪೊಲೀಸ್ ಸಿಬ್ಬಂದಿ ಈರಣ್ಣ ಜಾಲಿಹಾಳ ಅವರಿಗೆ ಸೇರಿದ ಕಾರಾಗಿದ್ದು,

ಬೆಂಕಿ ಹತ್ತಿದ ಕೂಡಲೇ ಕಾರಿನಿಂದ ಇಳಿದು ಬಚಾವ್ ಆಗಿದ್ದಾರೆ.

ಪತಿ ಈರಣ್ಣ, ಪತ್ನಿ ಹಾಗೂ ಇಬ್ಬರು ಮಕ್ಕಳು ಬಚಾವ್ ಆಗಿದ್ದು, ಕಾರು ನೋಡು ನೋಡುತ್ತಿದ್ದಂತೆ ಸುಟ್ಟ ಭಸ್ಮವಾಗಿದೆ.

ಸ್ಥಳಕ್ಕೆ ಅಗ್ನಿಶಾಮಕ ಸಿಬ್ಬಂದಿ ದೌಡಾಯಿಸಿ ಬೆಂಕಿ ನಂದಿಸುವ ಕಾರ್ಯ ಮಾಡಿದ್ದಾರೆ. ಗದಗ ಗ್ರಾಮೀಣ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಭಯೋತ್ಪಾದಕರ ಕೃತ್ಯಕ್ಕೆ ಖಂಡನೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಕಾಶ್ಮೀರದ ಪಹಲ್‌ಗಾಮದಲ್ಲಿ ಯಾತ್ರಿಕರ ಮೇಲೆ ನಡೆದ ಗುಂಡಿನ ದಾಳಿಯು ಇಡೀ ಮಾನವೀಯತೆಗೆ ಮಾರಕವಾದ ದಾಳಿಯಾಗಿದೆ ಎಂದು ಯುವ ಕರ್ನಾಟಕ ಭೀಮ ಸೇನೆ ಯುವಶಕ್ತಿ ಸಂಘ ಜಿಲ್ಲಾಧ್ಯಕ್ಷ ರಾಮು ಬಾಗಲಕೋಟ್ ಖಂಡಿಸಿದರು.

ಯುವ ಕರ್ನಾಟಕ ಭೀಮ ಸೇನೆ ಯುವಶಕ್ತಿ ಸಂಘ ಗದಗ ಜಿಲ್ಲಾ ಘಟಕದ ವತಿಯಿಂದ ನಗರದ ಕಾಟನ್ ಮಾರ್ಕೆಟ್ ರೋಡ್‌ನಲ್ಲಿರುವ ಕಾರ್ಮಿಕ ಕಲ್ಯಾಣ ಸಂಸ್ಥೆಯ ಕಾ೦ಚ್ರ್ಚಾಲ೦ಚ್ಚದ್‌ಲ್ಲಿ ಹಮ್ಮಿಕೊಂಡಿದ್ದ ಸಂತಾಪಸೂಚಕ ಸಭೆಯಲ್ಲಿ, ಈ ದುಷ್ಕೃತ್ಯದಲ್ಲಿ ಮಡಿದವರಿಗೆ ಸಂಘಟನೆಯ ಪರವಾಗಿ ಮೇಣದಬತ್ತಿ ಹಚ್ಚಿ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಿ ಅವರು ಮಾತನಾಡಿದರು.



ಶಹರ ಘಟಕದ ಅಧ್ಯಕ್ಷ ಶಬ್ಬೀರ್ ತಹಸೀಲ್ದಾರ ಘಟನೆಯನ್ನು ತೀವ್ರವಾಗಿ ಖಂಡಿಸಿ, ಈ ದಾಳಿಯಲ್ಲಿ ಪ್ರಾಣ ಕಳೆದುಕೊಂಡ ಕುಟುಂಬದವರಿಗೆ ಭಗವಂತ ದುಃಖವನ್ನು ಭರಿಸುವ ಶಕ್ತಿ ಕೊಡಲಿ ಎಂದು ಪ್ರಾರ್ಥಿಸಿ, ಈ ದಾಳಿಯಲ್ಲಿ ಗಾಯಗೊಂಡವರು ಶೀಘ್ರ ಗುಣಮುಖರಾಗಲೆಂದು ಪ್ರಾರ್ಥಿಸಿದರು.

ಹಿರಿಯರಾದ ನಜೀರ್ ಬಳ್ಳಾರಿ ಮಾತನಾಡಿ, ಈ ಕೃತ್ಯಕ್ಕೆ ಕಾರಣರಾದವರು ಯಾರೇ ಇದ್ದರೂ ಅವರಿಗೆ ಕಠಿಣ ಶಿಕ್ಷೆ ಆಗಬೇಕೆಂದು ಒತ್ತಾಯಿಸಿದರು. 29ನೇ ವಾರ್ಡಿನ ಅಧ್ಯಕ್ಷ ಖಾದರ್ ಭಾಷಾ ನವಲಗುಂದ್ ಕೃತ್ಯವನ್ನು ಖಂಡಿಸುವುದರ ಜೊತೆಗೆ ಭದ್ರತಾ ವೈಫಲ್ಯವು ಇರಬಹುದೆಂದು ತಮ್ಮ ಅನಿಸಿಕೆ ವ್ಯಕ್ತಪಡಿಸಿದರು. ಒಂದನೇ ವಾರ್ಡಿನ ಅಧ್ಯಕ್ಷರಾದ ಜಬಿವುಲ್ಲಾ ಬೋದ್ಲೆಖಾನ್ ಮಾತನಾಡಿ, ಈ ಕೃತ್ಯದಲ್ಲಿ ಭಾಗಿಯಾದ ಅಪರಾಧಿಗಳಿಗೆ ಕಠಿಣ ಶಿಕ್ಷೆ ಆಗಬೇಕು. ಅದಕ್ಕಾಗಿ ಕೇಂದ್ರ ಸರ್ಕಾರ ಕಠಿಣ ಕ್ರಮ ತೆಗೆದುಕೊಳ್ಳಬೇಕು ಎಂದರು.

ಸಭೆಯಲ್ಲಿ ಯಂಕಪ್ಪ ತಾಳದವರ್, ಸಾಧಿಕ ಧಾರವಾಡ, ಇಸ್ಮಾಯಿಲ್ ಶಿರವಾರ, ಸರ್ಫರಾಜ್ ನಾಯ್ಕರ್, ಫಯಾಜ್ ಕಬಾಡಿ, ರಫೀಕ್ ಹಣಗಿ, ಮೊಹಮ್ಮದ್ ರಫೀಕ್, ಇರ್ಫಾನ್ ಶಿರಹಟ್ಟಿ, ನಾಸಿರ್ ಚಿಕೇನಕೊಪ್ಪ ಸೇರಿದಂತೆ ಸದಸ್ಯರು ಭಾಗವಹಿಸಿದ್ದರು.

# ಜಿಲ್ಲಾ ಉಪ್ಪಾರ್ ಸಮಾಜದ ಸಭೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಭಗೀರಥ ದಿನಾಚರಣೆ ಹಾಗೂ ಸಮಾಜ ಸಂಘಟನೆಯ ಉದ್ದೇಶದಿಂದ ಗದಗ ಜಿಲ್ಲಾ ಉಪ್ಪಾರ್ ಸಮಾಜದ ಸಭೆಯನ್ನು ಎಪ್ರಿಲ್ 27ರಂದು ಮುಂಜಾನೆ 11 ಗಂಟೆಗೆ ಚೆನ್ನಮ್ಮ ಮಂಗಲ ಭವನ, ಕನಕ ಭವನ ಕುಟೀರ ಹೊಟೆಲ್ ಹತ್ತಿರ ಮುಳುಗುಂದ ರೋಡ್ ಗದಗ ಇಲ್ಲಿ ಕರೆಯಲಾಗಿದೆ.

ಗದಗ ಜಿಲ್ಲೆಯ ಮುಂಡರಗಿ, ಶಿರಹಟ್ಟಿ, ರೋಣ, ಗಜೇಂದ್ರಗಡ, ಲಕ್ಷ್ಮೇಶ್ವರ, ನರಗುಂದ ಮತ್ತು ಗದಗ ತಾಲೂಕಿನ ಸಮಸ್ತ ಉಪ್ಪಾರ್ ಸಮಾಜದ ಬಾಂಧವರು ಈ ಸಭೆಯಲ್ಲಿ ಭಾಗವಹಿಸಿ ಮಹರ್ಷಿ ಭಗೀರಥ ಜಯಂತಿ ಬಗ್ಗೆ ಹಾಗೂ ಸಂಘಟನೆ ಕುರಿತು ಸಲಹೆ-ಸೂಚನೆ ನೀಡುವುದರ ಮೂಲಕ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಪ್ರಕಟಣೆ ವಿನಂತಿಸಿದೆ.



ಗದಗ ವಾಣಿಜ್ಯೋದ್ಯಮ ಸಂಸ್ಥೆ, ಐ.ಎಂ.ಎ ಗದಗ, ಅಖಿಲ ಭಾರತ ವೀರಶೈವ ಮಹಾಸಭಾ, ರೋಟರಿ ಗದಗ ಹಾಗೂ ವಿವಿಧ ಸಂಘಟನೆಗಳು ಮೇಣದಬತ್ತಿ ಹಿಡಿದು ಮೌನ ಮೆರವಣಿಗೆ ಮೂಲಕ ಗಾಂಧಿ ವೃತ್ತದಲ್ಲಿ ಕಾಶ್ಮೀರದ ಪಹಲ್ಗಾಮ್‌ದಲ್ಲಿ ಹತ್ಯೆಯಾದವರ ಆತ್ಮಕ್ಕೆ ಶಾಂತಿ ಕೋರಿ ಮೌನಾಚರಣೆ ಮಾಡಲಾಯಿತು.

## ಶ್ರೀ ಜ. ರೇಣುಕಾಚಾರ್ಯ ಜಯಂತಿ ಯುಗಮನೋತ್ಸವ, ಪ್ರತಿಭಾ ಪುರಸ್ಕಾರ ಸಮಾರಂಭ

# ಜ. ರೇಣುಕರ ಸಿದ್ಧಾಂತ ನೆಮ್ಮದಿಗೆ ಮೂಲ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಪರಿಪೂರ್ಣತೆಯೆಡೆಗೆ ಸಾಗುವುದೇ ಮನುಷ್ಯನ ಪರಮ ಗುರಿ. ಅರಿವು-ಆದರ್ಶಗಳನ್ನು ಬೋಧಿಸಿ ಉದ್ಧರಿಸಿದವರು ಶ್ರೀ ಜಗದ್ಗುರು ರೇಣುಕಾಚಾರ್ಯರು. ಅವರು ಬೋಧಿಸಿದ ತತ್ವ ಸಿದ್ಧಾಂತಗಳು ಶಾಂತಿ, ನೆಮ್ಮದಿಯ ಬದುಕಿಗೆ ಮೂಲ ಸೆಲೆಯಾಗಿವೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶನಿವಾರ ನಗರದ ಶ್ರೀ ಜಗದ್ಗುರು ರೇಣುಕಾಚಾರ್ಯ ವಿದ್ಯಾ ಸಂಸ್ಥೆಯ ಭವ್ಯ ಸಭಾಂಗಣದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮನೋತ್ಸವ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ದೇಶ ಮತ್ತು ಧರ್ಮ ಮನುಷ್ಯನ ಎರಡು ಕಣ್ಣು. ಭಾರತೀಯ ಉತ್ಕೃಷ್ಟ ಸಂಸ್ಕೃತಿಯನ್ನು ಆಚಾರ್ಯರು, ಋಷಿ-ಮುನಿಗಳು, ಸಂತ-ಮಹಾಂತರು ಉಳಿಸಿ ಬೆಳೆಸಿಕೊಂಡು ಬಂದಿದ್ದಾರೆ. ಧರ್ಮ ಮತ್ತು ಆಚರಣೆ ಬೇರೆ ಬೇರೆಯಾದರೂ ತಲುಪುವ ಗುರಿ ಎಲ್ಲರದೂ ಒಂದೇ ಆಗಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಶಿವಾದ್ವೈತ ತತ್ವ ಸಿದ್ಧಾಂತಗಳ ಅರಿವು ಮಾನವ ಜೀವನದ ಸುಖ-ಶಾಂತಿಯ ಬದುಕಿಗೆ ಗಂಗೋತ್ರಿಯಾಗಿದೆ.



ಅಹಿಂಸಾದಿ ಧ್ಯಾನ ಪರ್ಯಂತರವಾದ ದಶ ಧರ್ಮ ಸೂತ್ರಗಳನ್ನು ಬೋಧಿಸಿ ಸಕಲರನ್ನು ಉದ್ಧರಿಸಿದ ಶ್ರೇಯಸ್ಸು ಅವರದು. ಕಾಯಕ ಮತ್ತು ದಾಸೋಹದ ಮೂಲಕ ಸಂತೃಪ್ತಿ ಬದುಕಿಗೆ ಸ್ಫೂರ್ತಿಯ ಸೆಲೆಯಾದವರು. ಇಂಥ ಮಹಿಮಾನ್ವಿತರ ಜಯಂತಿ ಆಚರಿಸುತ್ತಿರುವುದು ತಮಗೆ ಅತ್ಯಂತ ಸಂತೋಷ ತಂದಿದೆ ಎಂದರು.

ಮಹಲಿಂಗಪುರದ ವಿನಾಯಕ ಚಿಕ್ಕೋಡಿ ಇವರು ರೇಖಾಚಿತ್ರದಲ್ಲಿ ಬಿಡಿಸಿದ ಶ್ರೀ ಜಗದ್ಗುರು ರೇಣುಕಾಚಾರ್ಯರ ನವಲೀಲೆಯ ಭಾವಚಿತ್ರಗಳನ್ನು ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸೋಮಣ್ಣ ಬೇವಿನಮರದ ಇವರು ಅನಾವರಣಗೊಳಿಸಿ ಹರುಷ ವ್ಯಕ್ತಪಡಿಸಿದರು.

ನಿವೃತ್ತ ಪ್ರಾಧ್ಯಾಪಕರಾದ ಪ್ರೊ. ಎಚ್.ವಿ. ಪಂಚಾಕ್ಷರಯ್ಯ ಅವರು ಶ್ರೀ ಜಗದ್ಗುರು ರೇಣುಕಾಚಾರ್ಯರ ಧಾರ್ಮಿಕ ಮತ್ತು ಸಾಮಾಜಿಕ ಚಿಂತನಗಳನ್ನು ಕುರಿತು ಉಪನ್ಯಾಸವನ್ನಿತ್ತರು. ಸಮಾರಂಭದ ನೇತೃತ್ವ ವಹಿಸಿದ ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯರು, ಸಮ್ಮುಖ ವಹಿಸಿದ ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯರು ಉಪದೇಶಾಮೃತವನ್ನಿತ್ತರು. ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕಾರ ನೀಡಲಾಯಿತು.

ಸಮಾರಂಭದ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷ ಯು.ಎಂ. ಬಸವರಾಜ ವಹಿಸಿದ್ದರು. ಡಾ. ರೂಪ ಎನ್ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿದ್ಯಾಸಂಸ್ಥೆಯ ವಿದ್ಯಾರ್ಥಿಗಳಿಂದ ಪ್ರಾರ್ಥನಾ ಗೀತೆ ಜರುಗಿತು. ಡಾ.ಪ್ರೇಮ ಸಿದ್ಧರಾಜು ಸ್ವಾಗತಿಸಿದರು. ಡಾ. ಮಮತಾ ಸಾಲಿಮಠ ಮತ್ತು ಲಾವಣ್ಯ ಜಿ.ಕೆ ನಿರೂಪಿಸಿದರು.

ಸಮಾರಂಭ ಉದ್ಘಾಟಿಸಿದ ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ, ರೋಣ ಶಾಸಕರಾದ ಜಿ.ಎಸ್. ಪಾಟೀಲ ಮಾತನಾಡಿ, ಶ್ರೀ ಜಗದ್ಗುರು ರೇಣುಕಾಚಾರ್ಯರು ಶಿವಾವತಾರಿಗಳಾಗಿ ಅವತರಿಸಿ ಭೂ ಮಂಡಲದಲ್ಲಿ ವೀರಶೈವ ಸಿದ್ಧಾಂತವನ್ನು ಪ್ರತಿಷ್ಠಾಪನೆಗೈದ ಕೀರ್ತಿವಂತರು. ಅವರು ಈ ನಾಡಿನ ಸಂಸ್ಕೃತಿಗೆ ಮತ್ತು ಪರಂಪರೆಗೆ ಕೊಟ್ಟ ಕೊಡುಗೆ ಅಮೂಲ್ಯ ಎಂದರು.

## ಬಿಸಿಎನ್ ವಿಜನ್ ಪ್ರಥಮದರ್ಜೆ ಕಾಲೇಜಿನಲ್ಲಿ ಜಾನಪದ ಉತ್ಸವ

# ಜಾನಪದ ಯಾವುದೇ ವರ್ಗಕ್ಕೆ ಸೀಮಿತವಲ್ಲ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಜನಪದ ಸಾಹಿತ್ಯವು ಎಲ್ಲ ಸಾಹಿತ್ಯದ ಮೂಲವಾಗಿದ್ದು, ಧರ್ಮ, ಸಂಸ್ಕೃತಿ, ಆಚಾರ-ವಿಚಾರ, ಉಡುಗೆ-ತೊಡುಗೆಗಳ, ಮೌಲ್ಯಗಳ ಸಮ್ಮಿಲನವಾಗಿದೆ. ವಿದ್ಯಾರ್ಥಿಗಳು ಜನಪದ ಸಾಹಿತ್ಯ, ಸಂಸ್ಕೃತಿಯನ್ನು ಕೆದಕಿ ಹೊರತೆಗೆಯುವ, ಉಳಿಸಿ-ಬೆಳೆಸುವ ಕಾರ್ಯ ಮಾಡಬೇಕು ಎಂದು ಗುಡಗೇರಿ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಕನ್ನಡ ಉಪನ್ಯಾಸಕ ಪ್ರೊ. ವಾಯ್.ಎಚ್. ಬೀರಣ್ಣವರ ಹೇಳಿದರು.

ಅವರು ಪಟ್ಟಣದ ಬಿಸಿಎನ್ ವಿದ್ಯಾಸಂಸ್ಥೆಯ ಬಿಸಿಎನ್ ವಿಜನ್ ಪ್ರಥಮದರ್ಜೆ ಕಾಲೇಜಿನಲ್ಲಿ ಶನಿವಾರ ಹಮ್ಮಿಕೊಂಡಿದ್ದ ಜಾನಪದ ಉತ್ಸವವದಲ್ಲಿ ಉಪನ್ಯಾಸ ನೀಡಿ ಮಾತನಾಡಿದರು.

ಜಾನಪದ ಎನ್ನುವ ಪದ ಇಂಗ್ಲೀಷಿನಲ್ಲಿ ಈಠಟಞಟಠಡಿಜ ಎಂಬುದಕ್ಕೆ ಸಮಾನಾರ್ಥಕವಾಗಿ ಬಳಸಿರುವ ಕನ್ನಡ ಪದವಾಗಿದೆ.





ಜನಪದ ಜ್ಞಾನವೇ ಜಾನಪದ ಎನ್ನಬಹುದು. ಮನುಷ್ಯನ ಬದುಕಿನೊಂದಿಗೆ ಅವಿನಾಭಾವ ಸಂಬಂಧವನ್ನು ಹೊಂದಿ ತಲೆ-ತಲೆಮಾರುಗಳಿಂದ ಬಂದಿರುವ ಮೌಖಿಕ ಪರಂಪರೆಯಲ್ಲಿ ಸಂಬಂಧ ಜ್ಞಾನವೇ ಜಾನಪದವಾಗಿದೆ. ಇದು ತನ್ನದೇ ಆವರಣದಲ್ಲಿ ತಲೆಮಾರಿನಿಂದ ತಲೆಮಾರಿಗೆ ಸಾಗಿ ಬಂದಿದೆ. ಅದು ಯಾವುದೇ ವರ್ಗಕ್ಕೆ, ಜಾತಿಗೆ, ಸೀಮಿತವಾದುದಲ್ಲ ಎಂದರು.

ಇದು ಎಲ್ಲಿಯೂ ಬರೆದಿಟ್ಟ ಸಾಹಿತ್ಯವಲ್ಲ, ಬಾಯಿಂದ ಬಾಯಿಗೆ ಸಾಗಿಬಂದ ಸಾಹಿತ್ಯವಾಗಿದ್ದು, ಇಂದು ಬಂದಿರುವ ಅನೇಕ ಕ್ಯಾಸೆಟ್ ಜಾನಪದ ಸಂಗೀತ ಮೂಲ ಜಾನಪದವಲ್ಲ. ಅಲ್ಲದೆ ಜಾನಪದ ಹಾಡುಗಳು ಬಹುವರ್ಷದವರೆಗೂ ನೆನಪಿನಲ್ಲುಳಿಯುತ್ತವೆ. ಆದರೆ ಕ್ಯಾಸೆಟ್ ಜಾನಪದ ಸಾಹಿತ್ಯ ಆರಂಭದಲ್ಲಿ ವೇಗವಾಗಿ ಪ್ರಸಿದ್ಧಿ ಪಡೆದ ನಂತರದ ದಿನಗಳಲ್ಲಿ ಜನರ ಮನದಿಂದ ದೂರವಾಗುತ್ತದೆ. ಇದು ಮೂಲ ಜಾನಪದಕ್ಕಿರುವ ಜನಪ್ರಿಯತೆಯಾಗಿದೆ ಎಂದ ಅವರು, ಸರಕಾರ ರಾಜ್ಯಾದ್ಯಂತ ಕಾಲೇಜುಗಳಲ್ಲಿ ಜಾನಪದ ಉತ್ಸವ ಮಾಡಲು ಆದೇಶಿಸಿರುವುದು ಸರ್ಕಾರಕ್ಕೆ ಜನಪದ ಮೇಲಿರುವ ಕಾಳಜಿಯಾಗಿದೆ ಎಂದರು.

ಪ್ರಾಚಾರ್ಯ ಮಂಜುನಾಥ ಬಂಡಿವಾಡ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಂಸ್ಥೆಯ ಆಡಳಿತಾಧಿಕಾರಿ ನಾಗರಾಜ ಯಂಡಿಗೇರಿ, ಡಿ.ಎಂ. ಪೂಜಾರ, ಉಪನ್ಯಾಸಕರಾದ ಬಸವರಾಜ ಶೆಟ್ಟರ, ಗಿರೀಶ ರಡ್ಡಿ, ಪ್ರಸನ್, ರಮೇಶ ಗಿಣಿ, ರಾಜಶೇಖರಯ್ಯ, ಋಷಾ ಅರಳಿ, ಮೇಘಾ, ಜಯಲಕ್ಷ್ಮೀ, ವಿಜಯಕುಮಾರ, ಶಂಕರ ಬಡಿಗೇರ, ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು. ವಿದ್ಯಾರ್ಥಿಗಳಾದ ಭಾರತಿ ಸ್ವಾಗತಿಸಿದರು, ಚೈತ್ರಾ ನಿರೂಪಿಸಿದರು. ಕಾವ್ಯಾ ವಂದಿಸಿದರು.

ವಿದ್ಯಾರ್ಥಿಗಳಿಗೆ ಜಾನಪದ ಮಹತ್ವ ಸಾರುವ ಉದ್ದೇಶದಿಂದ ಹಲವಾರು ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು.

ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಕಾರ್ಯದರ್ಶಿ ಲೋಹಿತ್ ನೆಲವಿಗಿ ಮಾತನಾಡಿ, ಜಾಣರ ಸಮೂಹ ಸೃಷ್ಟಿಸಿದ ಅನುಭವಿಕ ಅದ್ಭುತ ಸಾಹಿತ್ಯವೇ ಜಾನಪದವಾಗಿದೆ. ಎಲ್ಲರಿಗೂ ಅರ್ಥವಾಗುವ ಗ್ರಾಮೀಣ ಜನರ ನಿತ್ಯ ಬದುಕಿನಲ್ಲಿ ಹಾಸುಹೊಕ್ಕಾಗಿರುವ ಒಗಟು, ಲಾವಣಿ, ಸೋಬಾನೆ ಹಾಡು, ಕುಟ್ಟುವ-ಬೀಸುವ ಪದ, ಹಂತಿ ಹಾಡು, ಡೊಳ್ಳಿನ ಹಾಡು, ಮದುವೆ ಹಾಡು ಹೀಗೆ ಇನ್ನೂ ಹಲವಾರು ಪ್ರಕಾರಗಳಲ್ಲಿ ಜಾನಪದ ಸಾಹಿತ್ಯವೇ ತುಂಬಿಕೊಂಡಿದೆ. ಸಂಸ್ಥೆಯಲ್ಲಿ ಇಲಾಖೆಯ ನಿಯಮಾನುಸಾರ ಜಾನಪದ ಉತ್ಸವ ಸೇರಿದಂತೆ ಅನೇಕ ಉಪಯುಕ್ತ ಕಾರ್ಯಕ್ರಮಗಳನ್ನು ಕಾಲೇಜಿನಲ್ಲಿ ಅಳವಡಿಸಲಾಗಿದೆ ಎಂದರು.

# ಪಾಕ್ ವಿದ್ಯಾರ್ಥಿಗಳಿದ್ದರೂ ವಾಪಸ್ ಕಳುಹಿಸಬೇಕಾಗುತ್ತದೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕೇಂದ್ರದ ಸೂಚನೆಯಂತೆ ಪಾಕ್ ವಿದ್ಯಾರ್ಥಿಗಳಿದ್ದರೂ ವಾಪಸ್ ಕಳುಹಿಸಬೇಕಾಗುತ್ತದೆ ಎಂದು ಗೃಹ ಸಚಿವ ಪರಮೇಶ್ವರ್ ಹೇಳಿದ್ದಾರೆ.

ನಗರದಲ್ಲಿ ಮಾತನಾಡಿದ ಅವರು, ರಾಜ್ಯದ ಎಲ್ಲಾ ಎಸ್‌ಪಿಗಳು, ಹಿರಿಯ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದೇವೆ. ಎಷ್ಟು ಮಂದಿ ಪಾಕ್ ಪ್ರಜೆಗಳಿದ್ದಾರೆ ಎಂದು ಪತ್ತೆ ಹಚ್ಚಲಾಗುತ್ತದೆ. ಪಾಕ್ ವಿದ್ಯಾರ್ಥಿಗಳಿದ್ದರೂ ವಾಪಸ್ ಕಳುಹಿಸಬೇಕಾಗುತ್ತದೆ. ಪಾಕ್ ವಿದ್ಯಾರ್ಥಿಗಳಿಗೆ ವಿನಾಯ್ತಿ ಕೊಟ್ಟ ಹಾಗೆ ಕಾಣಿಸುತ್ತಿಲ್ಲ ಎಂದರು.

ಪಾಕ್ ಪ್ರಜೆಗಳ ಬಗ್ಗೆ ಅಧಿಕಾರಿಗಳು ಮಾಹಿತಿ ಸಂಗ್ರಹ ಮಾಡುತ್ತಿದ್ದಾರೆ. ಬೆಂಗಳೂರಿನಲ್ಲಿಯೂ ಸೀನಿಯರ್ ಪೊಲೀಸ್ ಅಧಿಕಾರಿಗಳಿಗೆ ತಿಳಿಸಿದ್ದೇವೆ. ದೀರ್ಘಾವಧಿ ವೀಸಾ ಇದ್ದವರಿಗೆ ಕ್ರಮ ತೆಗೆದುಕೊಂಡಿದ್ದೇವೆ. ಪ್ರತಿ ಜಿಲ್ಲೆಯ ಎಸ್‌ಪಿಗೆ ತಿಳಿಸಿದ್ದೇವೆ. ರಾಜ್ಯದಲ್ಲಿ ಪೊಲೀಸ್ ಇಲಾಖೆ ಅಲರ್ಟ್ ಆಗಿದೆ. ಘಟನೆ ಆದಮೇಲೆ ಅಲರ್ಟ್ ಆಗಿದ್ದೇವೆ ಎಂದು ಗೃಹ ಸಚಿವ ಪರಮೇಶ್ವರ ತಿಳಿಸಿದರು.

# ಸಿದ್ಧಾಂತವೇ ಇಲ್ಲದ ಸಿದ್ದರಾಮಯ್ಯ ಇಂದು ನಮ್ಮ ಮುಂದೆ ಇದ್ದಾರೆ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸಿದ್ಧಾಂತವೇ ಇಲ್ಲದ ಸಿದ್ದರಾಮಯ್ಯ ಇಂದು ನಮ್ಮ ಮುಂದೆ ಇದ್ದಾರೆ ಎಂದು ವಿಪಕ್ಷ ನಾಯಕ ಆರ್.ಅಶೋಕ್ ಕಿಡಿಕಾರಿದ್ದಾರೆ. ನಗರದಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಮಾನಸಿಕ ಸ್ಥಿತಿ ಪೂರ್ತಿ ಮುಸ್ಲಿಮರ ಮತದ ಬಗ್ಗೆಯೇ ಯೋಚಿಸುವ ರೀತಿ ಆಗಿರುವುದು ದುರದೃಷ್ಟಕರ. ಹಾಗಾದರೆ ಸತ್ತಿರುವವರ ಪ್ರಾಣಕ್ಕೆ ಬೆಲೆಯೇ ಇಲ್ಲವೇ? ಎಂದು ಪ್ರಶ್ನಿಸಿದ್ದಾರೆ.

ನಿಮ್ಮ ಮನೆಯಲ್ಲಿ ಈ ರೀತಿ ಉಗ್ರರು ಬಂದು ಹೊಡೆದು ಹಾಕಿರುತ್ತಿದ್ದರೆ ಈ ರೀತಿ ಹೇಳುತ್ತಿದ್ದರಾ? ಹಾಗಾದರೆ ಸತ್ತವರ ಮನೆ ಬಾಗಿಲಿಗೆ ಹಾರ ಹಾಕಲು ಯಾಕೆ ಹೋಗಿದ್ರಿ? ಇಲ್ಲಿ ಬಂದು ಸತ್ತವರು ಸತ್ತರು ಎನ್ನುವುದು ನಾಚಿಕೆಗೇಡಿನ ಸಂಗತಿ. ಮಲ್ಲಿಕಾರ್ಜುನ ಖರ್ಗೆ ಎಲ್ಲರೂ ಒಟ್ಟಾಗಿ ಹೋರಾಡೋಣ ಎಂದಿದ್ದಾರೆ. ಇಲ್ಲಿ ಸಿದ್ದರಾಮಯ್ಯ ಮನೆ ಮುರಿಯುವ ಮಾತಾಡಿದ್ದಾರೆ.

ಯಾವುದೇ ಪಾಕಿಸ್ತಾನಿ ಭಾರತದಲ್ಲಿ ಇರಬಾರದು ಎಂದು ಕೇಂದ್ರ ಸರ್ಕಾರ ಸೂಚನೆ ಕೊಟ್ಟಿದೆ. ಭಟ್ಕಳದಲ್ಲಿ 10ಕ್ಕಿಂತ ಹೆಚ್ಚು ಪಾಕಿಸ್ತಾನದವರು ಇದ್ದಾರೆ. ಆದರೆ ಪಾಕಿಸ್ತಾನದಲ್ಲಿ ಈಗಾಗಲೇ ಭಾರತೀಯರನ್ನು ಹೊರ ಹಾಕಿದ್ದಾರೆ. ಇದರ ಬಗ್ಗೆ ಸಿದ್ದರಾಮಯ್ಯ ಯಾಕೆ ಮಾತನಾಡುತ್ತಿಲ್ಲ. ಕೂಡಲೇ ಭಟ್ಕಳದಲ್ಲಿರುವ ಪಾಕಿಸ್ತಾನದವರನ್ನು ಒದ್ದು ಹೊರ ಹಾಕಬೇಕು. ಮೀರ್ ಸಾಧಿಕ್‌ನಂತವರು ನಮ್ಮಲ್ಲೇ ಇದ್ದಾರೆ ಎಂದು ಆರೋಪಿಸಿದರು.

# ಜಾನಪದವನ್ನು ಉಳಿಸಿ ಬೆಳೆಸಬೇಕಿದೆ





■ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ದಿನಮಾನಗಳಲ್ಲಿ ನಮ್ಮ ಮೂಲ ಸಂಸ್ಕೃತಿ, ಆಚಾರ-ವಿಚಾರ, ಸಂಪ್ರದಾಯ, ರೂಢಿಗಳು ನಶಿಸಿ ಹೋಗುತ್ತಿವೆ. ವಿದೇಶೀಯ ಸಂಸ್ಕೃತಿ ರಾರಾಜಿಸುತ್ತಿದೆ. ಇಂತಹ ಕಾಲಘಟ್ಟದಲ್ಲಿ ನಮ್ಮ ಮೂಲ ಸಂಸ್ಕೃತಿ, ಭಾಷೆ, ಮೌಲ್ಯಗಳನ್ನು ಉಳಿಸಿ ಬೆಳೆಸಬೇಕಾದ ಅನಿವಾರ್ಯ, ಅಗತ್ಯವಿದೆ ಎಂದು ಹುಲಿಗೆಪ್ಪ ಎಸ್.ಜೊಂಡಿ ಅಭಿಪ್ರಾಯಪಟ್ಟರು.

ಇಲ್ಲಿನ ಸರ್ಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ 'ಜನಪದ ಉತ್ಸವ' ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಜನಪದ ಹಾಡು, ಒಗಟು, ಒಡಪು, ಲಾವಣಿಗಳ ಸಾಹಿತ್ಯದಲ್ಲಿ ಸಂಸ್ಕೃತಿಯ ಬೇರುಗಳಾಗಿವೆ. ಅವುಗಳನ್ನು ಮುಂದಿನ ಜನಾಂಗಕ್ಕೆ ಪೋಷಿಸಿ ಉಳಿಸಿ ಬೆಳೆಸಬೇಕೆಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಡಾ. ಶಿವಪ್ಪ ಎಂ.ಕುರಿ ಅನಿಸಿಕೆ ವ್ಯಕ್ತಪಡಿಸಿದರು. ಐಕ್ಯೂ ಎಸಿ ಸಂಚಾಲಕರಾದ ಮಹಾಂತೇಶ್ ಮುಧೋಳ ಹಾಗೂ ಸಾಂಸ್ಕೃತಿಕ ವಿಭಾಗದ ಸಂಚಾಲಕರಾದ ಮಹಾದೇವ ಫ.ವಡೇಕಾರ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಚಾರ್ಯ ಪ್ರೊ ಕೆ.ಎಂ. ಚಿಕ್ಕೇರೂರ ವಹಿಸಿದ್ದರು.

ಆಶಾ ಪ್ರಾರ್ಥಿಸಿದರು. ಎಸ್.ಎ. ಸಂಗನಾಳ ಸ್ವಾಗತಿಸಿದರು. ಶರಣಪ್ಪ ಹೊಸಳ್ಳಿ ಕಾರ್ಯಕ್ರಮ ನಿರೂಪಿಸಿದರು. ನಾಗಮ್ಮನವರ್ ವಂದಿಸಿದರು.

# ಸಾರಿಗೆ ಸಿಬ್ಬಂದಿಗಳ ಸೇವೆ ಶ್ಲಾಘನೀಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ನಿತ್ಯ ನೂರಾರು ಜನರನ್ನು ಹೊತ್ತು ಸಾಗಿಸುವ ಸಾರಿಗೆ ವಾಹನಗಳ ನಿರ್ವಾಹಕ, ಚಾಲಕ ಮತ್ತು ಸಿಬ್ಬಂದಿಗಳಾಗಿ ಕಾರ್ಯನಿರ್ವಹಿಸುವವರ ಸೇವೆ ಸದಾ ಶ್ಲಾಘನೀಯವಾಗಿದ್ದು, ಸಾರಿಗೆ ಸೇವೆಯಲ್ಲಿ ಕಾ ಂರ್ು ನಿ ರ್ವ ಹಿ ಸ ುವ ಸಿಬ್ಬಂದಿಗಳ ಕಾರ್ಯವನ್ನು ಗುರುತಿಸಿ ಗೌರವಿಸುವ ಕಾರ್ಯವನ್ನು ಸಮಾಜ ಮಾಡಬೇಕಾಗಿದೆ ಎಂದು ನಗರ ಸಾರಿಗೆ ಘಟಕ ವ್ಯವಸ್ಥಾಪಕಿ ಸವಿತಾ ಆದಿ ಹೇಳಿದರು.

ಅವರು ಪಟ್ಟಣದ ಜೆಸಿಐ ಲಕ್ಷ್ಮೇಶ್ವರ ಪುಲಿಗೆರೆ ಪ್ರಭೆ ಸಂಸ್ಥೆಯ ವತಿಯಿಂದ ಶುಕ್ರವಾರ ಕೆಎಸ್‌ಆರ್‌ಟಿಸಿ ಹಿರಿಯ ಸಿಬ್ಬಂದಿಗಳಿಗೆ ಸೇವಾಭಾವನೆ, ಶಿಸ್ತು ಮತ್ತು ಸಮಯಪಾಲನೆಯ ಪ್ರತ್ಯೇಕವಾಗಿ ಗುರುತಿಸಲ್ಪಡುವ ಚಾಲಕರಿಗೆ, ನಿರ್ವಾಹಕರಿಗೆ, ತಾಂತ್ರಿಕ ಮತ್ತು ತಾಂತ್ರಿಕೇತರ ಸಿಬ್ಬಂದಿಗೆ ಸನ್ಮಾನ, ಗೌರವ ಸಮರ್ಪಣೆ ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.





ಇಲ್ಲಿನ ಘಟಕದಲ್ಲಿನ ಬಹುತೇಕ ಸಿಬ್ಬಂದಿಗಳು ಉತ್ತಮವಾಗಿ ಹಾಗೂ ಪ್ರಾಮಾಣಿಕವಾಗಿ ಸೇವೆ ಸಲ್ಲಿಸುವ ಮೂಲಕ ತಮ್ಮ ವೃತ್ತಿಯನ್ನು ನಿರ್ವಹಿಸುತ್ತಿದ್ದಾರೆ. ಇದರಿಂದ ಘಟಕಕ್ಕೆ ಉತ್ತಮ ಹೆಸರು ಲಭ್ಯವಾಗಿದೆ. ಘಟಕದಲ್ಲಿ ನಡೆಯುವ ಎಲ್ಲ ಕಾರ್ಯಗಳಿಗೂ ಸಿಬ್ಬಂದಿಗಳ ಸಹಕಾರವೇ ಮುಖ್ಯವಾಗಿದ್ದು, ನಮ್ಮ ಘಟಕದ ಸಿಬ್ಬಂದಿಗಳನ್ನು ಗುರುತಿಸಿ ಗೌರವಿಸುವ ಕಾರ್ಯ ಮಾಡಿರುವ ಜೆಸಿಐ ಸಂಸ್ಥೆಗೆ ಧನ್ಯವಾದ ಅರ್ಪಿಸುವದಾಗಿ ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜೆಸಿಐ ಲಕ್ಷ್ಮೇಶ್ವರ ಪುಲಿಗೆರೆ ಪ್ರಭೆ ಸಂಸ್ಥೆಯ ಅಧ್ಯಕ್ಷೆ ಲಕ್ಷ್ಮೀ ಹಂಗನಕಟ್ಟಿ ಮಾತನಾಡಿ, ಸಾರಿಗೆ ಸಿಬ್ಬಂದಿಯ ಸೇವೆಯನ್ನು ಶ್ಲಾಘಿಸಿ, ಅವರ ನಿಸ್ವಾರ್ಥ ಸೇವೆಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಪುರಸಭೆ ಸದಸ್ಯ ವಸೀಂ ಮುಚ್ಚಾಲೆ, ಜೆಸಿಐ ಕಾರ್ಯದರ್ಶಿ ಪ್ರಶಾಂತ ನರಸಮ್ಮನವರ, ಉಪಾಧ್ಯಕ್ಷ ಬಸವರಾಜ್ ಮಜ್ಜಿಗುಡ್ಡದ, ಬಸವರಾಜ ಅರಳಿ, ರಾಜೇಶ ಕೆರೂರು, ಶಿವಪ್ರಕಾಶ ಗುಡ್ಡಿಮಠ ಮತ್ತು ಲಕ್ಷ್ಮೇಶ್ವರ ಸಾರಿಗೆ ಘಟಕದ ಎಲ್ಲ ಸಿಬ್ಬಂದಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಪ್ರಧಾನಿ ಮೋದಿಯವರ ಈ ಆಟಿಟ್ಯೂಡ್ ಸರಿ ಇಲ್ಲ: ಮಲ್ಲಿಕಾರ್ಜುನ ಖರ್ಗೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಪ್ರಧಾನ ಮಂತ್ರಿ ಮೋದಿಯವರ ಈ ಆಟಿಟ್ಯೂಡ್ ಸರಿ ಇಲ್ಲ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅಸಮಾಧಾನ ಹೊರಹಾಕಿದ್ದಾರೆ.

ನಗರದಲ್ಲಿ ಮಾತನಾಡಿದ ಅವರು, ಪೆಹಲ್ಗಾಮ್ ದಾಳಿ ವಿಚಾರವಾಗಿ ಪ್ರಧಾನ ಮಂತ್ರಿಗಳು ಸರ್ವ ಪಕ್ಷಗಳ ಸಭೆ ಕರೆದಿದ್ದರು.

ನಾವು ಎಲ್ಲರೂ ಹೋಗಿದ್ದೆವು. ಎಲ್ಲರೂ ಭಾಗಿಯಾಗಿದ್ದೆವು. ಲೋಕಸಭೆ ಹಾಗೂ ರಾಜ್ಯಸಭೆಯ ವಿರೋಧ ಪಕ್ಷದ ನಾಯಕರು ಕೂಡ ಇದ್ದರು. ಸರ್ಕಾರ ಒಂದು ಸಭೆಯನ್ನ ಕರೆದ ನಂತರ ಸರ್ಕಾರದ ವತಿಯಿಂದ ಪ್ರಧಾನ ಮಂತ್ರಿ ಹಾಜರಿರಬೇಕಿತ್ತು.




ಆದರೆ, ಅವರ ಹಾಜರಾತಿ ಇರಲಿಲ್ಲ. ಈ ನಡೆ ಸರಿಯಲ್ಲ. ಇಂತಹ ಘಟನೆ ನಡೆದಿದೆ. ಸುಮಾರು 26 ಜನರು ಮೃತಪಟ್ಟಿದ್ದಾರೆ. ಅನೇಕ ಜನರು ಗಾಯಾಳುಗಳಾಗಿದ್ದಾರೆ. ಪ್ರಧಾನ ಮಂತ್ರಿಗಳ ಈ ಆಟಿಟ್ಯೂಡ್ ಸರಿ ಇಲ್ಲ ಎಂದು ಅಸಮಾಧಾನ ಹೊರಹಾಕಿದ್ದಾರೆ. ಪಹಲ್ಗಾಮ್‌ನಲ್ಲಿ ಏನಾಯ್ತು? ಜಾತಿ ಕೇಳಿ, ಧರ್ಮ ಕೇಳಿ ಬಲಿ ಹಾಕಿದರು. ಆ ರೀತಿ ನಡೆಯಬಾರದು. ಈ ರಾಜ್ಯದಲ್ಲೂ ಕೂಡ ಕೆಲವರು ಜಾತಿಯನ್ನು ಆಧರಿಸಿ, ಧರ್ಮವನ್ನೇ ಆಧರಿಸಿ ಮಾತನಾಡುತ್ತಾರೆ. ಅದು ಯಾವುದೇ ಕಾರಣಕ್ಕೂ ನಡೆಯಬಾರದು. ಶಿಕ್ಷಣ ಸಂಸ್ಥೆಯಲ್ಲಿ ನಾನು ಜಾತಿ ಧರ್ಮದ ಬಗ್ಗೆ ಮಾತನಾಡುವುದಿಲ್ಲ. ನೀವು ವಿದ್ಯಾರ್ಥಿಗಳು ಕೂಡ ಜಾತಿ-ಧರ್ಮದ ಬಗ್ಗೆ ಮಾತನಾಡಬಾರದು ಎಂದರು.

# ಪಾಕಿಸ್ತಾನದೊಂದಿಗೆ ಕ್ರಿಕೆಟ್ ಸಂಬಂಧ ಅಂತ್ಯಗೊಳಿಸಬೇಕು: ಸೌರವ್ ಗಂಗೂಲಿ!

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಪಾಕಿಸ್ತಾನದೊಂದಿಗೆ ಕ್ರಿಕೆಟ್ ಸಂಬಂಧ ಅಂತ್ಯಗೊಳಿಸಬೇಕು ಎಂದು ಭಾರತ ಕ್ರಿಕೆಟ್ ತಂಡದ ಮಾಜಿ ನಾಯಕ ಸೌರವ್ ಗಂಗೂಲಿ ಹೇಳಿದ್ದಾರೆ.

ಕಾಶ್ಮೀರದಲ್ಲಿ ಉಗ್ರರ ದಾಳಿಯ ಬಗ್ಗೆ ಉಗ್ರವಾಗಿ ಪ್ರತಿಕ್ರಿಯಿಸಿದ ಸೌರವ್ ಗಂಗೂಲಿ, ಪಹಲ್ಗಾಮ್ ಘಟನೆ ತಮಾಷೆಯಲ್ಲ. ಭಯೋತ್ಪಾದನೆಯನ್ನು ಸಹಿಸಲು ಸಾಧ್ಯವಿಲ್ಲ. ಇಡೀ ದೇಶದಾದ್ಯಂತ ಈ ದಾಳಿಯನ್ನು ಖಂಡಿಸಲಾಗುತ್ತಿದೆ. ಹೀಗಾಗಿ ಪಾಕಿಸ್ತಾನದ ವಿರುದ್ಧ ಐಸಿಸಿ ಮತ್ತು ಏಷ್ಯನ್ ಪಂದ್ಯಾವಳಿಗಳಲ್ಲಿಯೂ ಆಡಬಾರದು. ಕ್ರಿಕೆಟ್ ಜೊತೆಗೆ ಪಾಕಿಸ್ತಾನದೊಂದಿಗೆ ಯಾವ ಸಂಬಂಧವೂ ಬೇಡ ಎಂದು ಗಂಗೂಲಿ ಗುಡುಗಿದ್ದಾರೆ.



ಪಾಕಿಸ್ತಾನದೊಂದಿಗಿನ ಸ ಂ ಬ ಂ ಧ ' ವ ನ್ನು 100 ಪ್ರತಿಶತ ಕೊನೆಗೊಳಿಸಬೇಕು. ಕಠಿಣ ಕ್ರಮ ಕೈಗೊಳ್ಳುವುದು ಅಗತ್ಯ. ಪ್ರತಿ ವರ್ಷ ಇಂತಹ ಘಟನೆಗಳು ನಡೆಯುವುದು ತಮಾಷೆಯಲ್ಲ. ಭ ' ಂ ಯೋ ತ್ಪಾ ದ ನೆ ' ಂ ು ನ್ನು ಸಹಿಸಲಾಗುವುದಿಲ್ಲ ಎಂದು ಗಂಗೂಲಿ ಹೇಳಿಕೆ ನೀಡಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka